# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 73 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 02–10–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 73 | RNI No: KARKAN/2023/88462 | Chitradurga | Date: 02-10-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಧರ್ಮಸ್ಥಳ ಸಂಘ ನೂರಾರು ಕುಟುಂಬಗಳಿಗೆ ಸ್ವಾವಲಂಬಿ ಬದುಕು ಕಲ್ಪಿಸಿದೆ: ಬಸವರಾಜ್ 2

ಎನ್‌ಜಿಓಗಳ ಸಹಕಾರದೊಂದಿಗೆ ಸ್ಕ್ಯಾವೆಂಜರ್ ಸಮೀಕ್ಷೆ ನಡೆಸಿ: ಡಿಸಿ 3

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅ.3 ರಂದು ಪಿಎಸ್‌ಐ ಪರೀಕ್ಷೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಅ.5ರಂದು ತಾಲ್ಲೂಕು ಮಟ್ಟದ ಕಾರ್ಯಗಾರ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಐ.ಇ.ಸಿ ಚಟುವಟಿಕೆಯಡಿಯಲ್ಲಿ ಹೊದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿಗೆ ಸಂಬಂಧಿಸಿದಂತೆ ಕಾರ್ಮಿಕ ಇಲಾಖೆಯಿಂದ ಕಾರ್ಮಿಕ ಕಾಯ್ದೆಗಳು ಪರಿಣಾಮಕಾರಿಯಾಗಿ ಅನುಷ್ಟಾನಗೊಳಿಸಲು ತಾಲ್ಲೂಕು ಮಟ್ಟದ ಕಾರ್ಯಗಾರವನ್ನು ಇದೇ.ಅ.5 ರಂದು ಬೆಳಿಗ್ಗೆ 10 ಗಂಟೆಗೆ ಹೊಸದುರ್ಗ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅಂಗಡಿ ಮತ್ತು ವಾಣಿಜ್ಯ ಸಂಸ್ಥೆ ಕಾಯ್ದೆ, ಕನಿಷ್ಠ ವೇತನ, ವೇತನ ಪಾವತಿ, ಸಮಾನ ವೇತನ, ಗುತ್ತಿಗೆ ಕಾರ್ಮಿಕ ಕಾಯ್ದೆ, ಬಾಲ ಕಾರ್ಮಿಕ, ಕೈಗಾರಿಕ ವಿವಾದ ಕಾಯ್ದೆ, ಸ್ಥಾಯಿ ಆದೇಶಗಳು ಉಪಧನ ಪಾವತಿ, ಬೋನಸ್ ಪಾವತಿ ಕಾಯ್ದೆ, ಮೆಟರನಿಟಿ ಬೆನಿಫಿಟ್ ಆಕ್ಟ್, ಸೆಲ್ಸ್ ಪ್ರಮೋಷನ್, ಕಟ್ಟಡ ಮತ್ತು ಇತರೆ ನಿರ್ಮಾಣ ಮಂಡಳಿಯ ಯೋಜನೆ ಮತ್ತು ಅಸಂಘಟಿತ ಕಾರ್ಮಿಕ ವಲಯದ ಯೋಜನೆಗಳ ಅನುಷ್ಠಾನದ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ಮಾಹಿತಿ ನೀಡುವರು. ಹೊಳಲ್ಕೆರೆ ಮತ್ತು ಹೊಸದುರ್ಗ ತಾಲ್ಲೂಕಿನ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆ, ಕಾರ್ಖಾನೆಯ ಗುತ್ತಿಗೆದಾರರು, ಎಲ್ಲಾ ವರ್ಗದ ಉದ್ಯೋಗ ಮಾಲೀಕರು, ಕಾರ್ಮಿಕರು, ಕಟ್ಟಡ ಮತ್ತು ಇತರೆ ನಿರ್ಮಾಣದ ಕಾರ್ಮಿಕರ ಕಾರ್ಮಿಕ ಸಂಘಟನೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಟ್ಯಾಕ್ಸಿ, ಮ್ಯಾಕ್ಸಿ, ಕ್ಯಾಬ್, ಆಟೋ ರಿಕ್ಷಾ, ವಾಹನ ಚಾಲಕರು, ಗ್ಯಾರೇಜ್ ಮಾಲೀಕರು, ಮೆಕ್ಯಾನಿಕ್ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಎಲ್ಲಾ ಪದಾಧಿಕಾರಿಗಳು ಕಾರ್ಯಗಾರಕ್ಕೆ ಸದುಪಯೋಗ ಪಡೆದುಕೊಳ್ಳುವಂತೆ ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂ ಸಾಬ್ ಕೋರಿದ್ದಾರೆ.

### ಜಿಲ್ಲಾಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ಫಲಿತಾಂಶ

» **ಚಿತ್ರದುರ್ಗ**

ಮಹಾತ್ಮಾ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಪ್ರೌಢಶಾಲೆ, ಪದವಿಪೂರ್ವ ಹಾಗೂ ಪದವಿ–ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾದ "ಬಾಪೂಜಿ ಪ್ರಬಂಧ ಸ್ಪರ್ಧೆ"ಯಲ್ಲಿ ವಿವಿಧ ವಿಭಾಗಗಳಲ್ಲಿ ತಲಾ ಮೂವರು ವಿದ್ಯಾರ್ಥಿಗಳನ್ನು ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ. ಮಹಾತ್ಮಾ ಗಾಂಧೀಜಿಯವರ ಜೀವನ, ಸಾಧನೆ ಹಾಗೂ ಅವರ ಸರಳತೆ, ಅಹಿಂಸಾ ತತ್ವಗಳ ಬಗ್ಗೆ ಯುವಜನರಲ್ಲಿ ಹೆಚ್ಚಿನ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಬಾಪೂಜಿ ಪ್ರಬಂಧ ಸ್ಪರ್ಧೆಯ ಪ್ರೌಢಶಾಲಾ ವಿಭಾಗದಲ್ಲಿ ಮೊಳಕಾಲ್ಮುರು ತಾಲ್ಲೂಕು ದೇವಸಮುದ್ರ ಸರ್ಕಾರಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಪೂಜಾ (ಪ್ರಥಮ), ಹಿರಿಯೂರು ತಾಲ್ಲೂಕು ಎಂ.ಡಿ.ಕೋಟೆ ಸರ್ಕಾರಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಪಿ.ಇಂಚರ (ದ್ವಿತೀಯ) ಹಾಗೂ ಚಿತ್ರದುರ್ಗ ನಗರದ ಶ್ರೀ ಬೃಹನ್ಮಠ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಪಿ.ಸಿ.ಬಿಂದು (ತೃತೀಯ) ಸ್ಥಾನ ಪಡೆದಿದ್ದಾರೆ. ಪದವಿಪೂರ್ವ ಕಾಲೇಜು ವಿಭಾಗದಲ್ಲಿ ಮೊಳಕಾಲ್ಮುರು ಚಿಕ್ಕೋಬನಹಳ್ಳಿ ಎಸ್‌ಎಪಿ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ಎಂ.ಅಭಿಷೇಕ್ (ಪ್ರಥಮ), ಚಿತ್ರದುರ್ಗ ನಗರದ ವೆಸ್ಟರನ್ ಹಿಲ್ಸ್ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಎ.ಅಮೃತ (ದ್ವಿತೀಯ) ಹಾಗೂ ಚಳ್ಳಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ಹೆಚ್.ದಾದಾಪೀರ್ (ತೃತೀಯ) ಸ್ಥಾನ ಪಡೆದಿದ್ದಾರೆ. ಪದವಿ–ಸ್ನಾತಕೋತ್ತರ ವಿಭಾಗದಲ್ಲಿ ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜಿನ ಬಿಎಸ್‌ಸಿ ಅಂತಿಮ ವರ್ಷದ ವಿದ್ಯಾರ್ಥಿನಿ ಜಿ.ಎಸ್. ಅಮೂಲ್ಯ (ಪ್ರಥಮ), ಚಿತ್ರದುರ್ಗದ ಶಿಕ್ಷಕರ ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯದ ದ್ವಿತೀಯ ವರ್ಷದ ಬಿ.ಇಡಿ ವಿದ್ಯಾರ್ಥಿ ಡಿ.ಆರ್.ಸಂತೋಷ್ ಕುಮಾರ್ (ದ್ವಿತೀಯ) ಹಾಗೂ ಚಿತ್ರದುರ್ಗ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಪ್ರಥಮ ವರ್ಷದ ವಿದ್ಯಾರ್ಥಿನಿ ಎ.ಚೈತ್ರ (ತೃತೀಯ) ಸ್ಥಾನ ಪಡೆದಿದ್ದಾರೆ. ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದವರಿಗೆ ಕ್ರಮವಾಗಿ ರೂ. 3000, 2000 ಹಾಗೂ 1000 ರೂ. ನಗದು ಬಹುಮಾನ ನೀಡಲಾಗುವುದು. ಇದೇ ಅ.02ರಂದು ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿರುವ ಗಾಂಧಿ ಜಯಂತಿ ಸಮಾರಂಭದಲ್ಲಿ ನಗದು ಬಹುಮಾನ ಮತ್ತು ಪ್ರಮಾಣ ಪತ್ರಗಳನ್ನು ವಿತರಿಸಲಾಗುವುದು ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ತಿಳಿಸಿದ್ದಾರೆ.

# ವಿಶ್ವಮಾನವರಾಗಲು ಹಿರಿಯರ ಅನುಭವ ದಾರಿದೀಪ: ಸಿದ್ದರಾಮಯ್ಯ

## ಸಮಾಜಮುಖಿ ಕಾರ್ಯಗಳ ಮೂಲಕ ಹಿರಿಯರಿಗೆ ಗೌರವ ಸಲ್ಲಿಸಬೇಕು– ಮುಖ್ಯಮಂತ್ರಿ

» **ಬೆಂಗಳೂರು**

ಹಿರಿಯ ನಾಗರಿಕರ ಸಾಧನೆಗಳು ಯುವಜನರಿಗೆ ಸ್ಪೂರ್ತಿ .ಹಿರಿಯರ ಬದುಕು ಕೇವಲ ಆದರ್ಶವಾಗಿಸದೇ, ಸಮಾಜಮುಖಿಯಾಗಿ ಕೆಲಸ ಮಾಡುವ ಮೂಲಕ ಅವರಿಗೆ ಗೌರವ ಸಲ್ಲಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರ ದಲ್ಲಿ ಆಯೋಜಿಸಲಾಗಿದ್ದ *ವಿಶ್ವ ಹಿರಿಯ ನಾಗರೀಕರ ದಿನಾಚರಣೆ–2024 ಯನ್ನು ಉದ್ಘಾಟನೆ ಮಾಡಿ ನಂತರ ಕಾರ್ಯಕ್ರಮ* ವನ್ನು ಉದ್ದೇಶಿಸಿ ಮಾತನಾಡಿದರು.

ಈ ಬಾರಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು, 'ಘನತೆಯ ಬಾಳಿನೊಂದಿಗೆ ವಯೋಪಕ್ವತೆ: ವಿಶ್ವದಾದ್ಯಂತ ಹಿರಿಯ ಜೀವಿಗಳಿಗೆ ಆರೈಕೆ ಮತ್ತು ಬೆಂಬಲ ವ್ಯವಸ್ಥೆಗಳನ್ನು ಸದೃಢಗೊಳಿಸುವುದರ ಮಹತ್ವ'ಎಂಬ ವಿಶ್ವಸಂಸ್ಥೆಯ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು.



**ವಿಶ್ವಮಾನವರಾಗಲು ಹಿರಿಯರ ಅನುಭವ ದಾರಿದೀಪ:** ಹಿರಿಯನ್ನು ಗೌರವದಿಂದ ಕಾಣಬೇಕು. ಅವರ ಅನುಭವಗಳನ್ನು ಗೌರವರಿಸಿ ಪಾಲಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ಹಿರಿಯ ಕೊಡುಗೆಗಳು ಹಾಗೂ ಅವರ ಮಾರ್ಗದರ್ಶನದಿಂದ ಜೀವನದಲ್ಲಿ ಏಳಿಗೆಯನ್ನು ಕಾಣಬಹುದು. ಬಾಲ್ಯ , ಯೌವ್ವನ, ವೃದ್ಧಾಪ್ಯ, ಮಾನವನ ಜೀವನದ ಸಹಜ ಘಟ್ಟಗಳು. ಹಿರಿಯ ನಾಗರಿಕರ ಸಾಧನೆಗಳು ಯುವಜನರಿಗೆ ಸ್ಪೂರ್ತಿ ನೀಡಲೆಂಬ ಸದುದ್ದೇಶದಿಂದ ಹಿರಿಯ ನಾಗರಿಕನ್ನು ಗೌರವಿಸಿ ಸನ್ಮಾನಿಸಲಾಗುತ್ತದೆ. ನಮ್ಮ ಆತ್ಮಸಾಕ್ಷಿಯೇ ನ್ಯಾಯಾಲಯವಿದ್ದಂತೆ ಎಂದು ಮಹಾತ್ಮಾಗಾಂಧೀಜಿಯವರು ಹೇಳಿದ್ದರು. ಸಮಾಜದಲ್ಲಿ ಇಂದೂ ಮೌಢ್ಯಗಳು, ಕಂದಾಚಾರಗಳಿವೆ. ಇವುಗಳಿಗೆ ಜೋತುಬೀಳದೇ ವೈಚಾರಿಕತೆಯನ್ನು ಬೆಳೆಸಿಕೊಳ್ಳುವ ಅಗತ್ಯವಿದೆ. ರಾಷ್ಟ್ರಕವಿ ಕುವೆಂಪು ರವರು ತಿಳಿಸಿದಂತೆ ಮಾನವ , ಅಲ್ಪಮಾನವನಾದೇ,ವಿಶ್ವಮಾನವನಾಗಲು ಪ್ರಯತ್ನಿಸಬೇಕು. ಇದಕ್ಕಾಗಿ ಹಿರಿಯರ ಅನುಭವಗಳು ನಮಗೆ ದಾರಿದೀಪವಾಗಿದೆ ಎಂದರು.

**ಮಾಸಾಶನ ಹೆಚ್ಚಳದ ಬಗ್ಗೆ ಪರಿಶೀಲಿಸಿ ತೀರ್ಮಾನ:** 2011ರ ಜನಗಣತಿ ಪ್ರಕಾರ ರಾಜ್ಯದಲ್ಲಿ ಸುಮಾರು 57.91ಲಕ್ಷದಷ್ಟು ಹಿರಿಯ ನಾಗರಿಕರಿದ್ದಾರೆ. ಇತ್ತೀಚಿನ ದಿನಮಾನದಲ್ಲಿವೃದ್ಧಾಶ್ರಮಗಳು ಹೆಚ್ಚುತ್ತಿವೆ. ಇದಕ್ಕೆ ಕಾರಣ, ಮಕ್ಕಳು ವಿದೇಶದಲ್ಲಿ ನೆಲಿಸಿ, ತಂದೆತಾಯಿಯನ್ನು ಪೋಷಿಸಲು ಸಾಧ್ಯವಾಗದೆ ವೃದ್ಧಾಶ್ರಮಗಳಿಗೆ ಸೇರಿಸುತ್ತಾರೆ. ಸುಮಾರು 50 ಲಕ್ಷ ಹಿರಿಯ ನಾಗರಿಕರಿಗೆ ಮಾಸಾಶನ ನೀಡಲಾಗುತ್ತಿದೆ. ಈ ಮಾಸಾಶನದ ಮೊತ್ತವನ್ನು ಹೆಚ್ಚಿಸುವ ಬಗ್ಗೆ ಪರಿಶೀಲಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

**ಪ್ರಶಸ್ತಿ ವಿಜೇತರಿಗೆ ಅಭಿನಂದನೆ:** ಹಿರಿಯ ನಾಗರಿಕರ ನೆಮ್ಮದಿಗೆ ಹಾಗೂ ಆರೋಗ್ಯವನ್ನು ಖಾತ್ರಿಪಡಿಸುವುದು ಸರ್ಕಾರದ ಕರ್ತವ್ಯ. ತಾಲ್ಲೂಕು ಕೇಂದ್ರಗಳಲ್ಲಿ ಡಯಾಲಿಸಿಸ್ ವ್ಯವಸ್ಥೆಯನ್ನು ಮಾಡಿಕೊಡಲಾಗಿದೆ. ಸಮಸಮಾಜ ನಿರ್ಮಿಸುವ ನಮ್ಮ ಗುರಿಯನ್ನು ಈಡೇರಿಸಲು ಆರ್ಥಿಕವಾಗಿ, ಸಾಮಾಜಿಕವಾಗಿ ಆಶಕ್ತರಾಗಿರುವ ಜನರಿಗೆ ಶಕ್ತಿ ತುಂಬುವ ಕೆಲಸವನ್ನು ಸರ್ಕಾರ ಮಾಡುತ್ತಿದೆ.ಹಿರಿಯ ನಾಗರಿಕರು, ವಿಕಲಚೇತನರ ಬೇಡಿಕೆಗಳ ಬಗ್ಗೆ ಪರಿಶೀಲನೆ ನಡೆಸುವುದಾಗಿ ತಿಳಿಸಿದ ಮುಖ್ಯಮಂತ್ರಿಗಳು, ಪ್ರಶಸ್ತಿ ವಿಜೇತರಿಗೆ ಅಭಿನಂದನೆಗಳನ್ನು ಸಲ್ಲಿಸಿ, ಪ್ರಶಸ್ತಿ ಪುರಸ್ಕೃತರ ಸಾಧನೆಗಳು ಯುವಜನರಿಗೆ ಪ್ರೇರಣೆಯಾಗಲಿ ಎಂದು ಆಶಿಸಿದರು.

## ಇಂಗ್ಲಿಷ್ ಭಯ ಹೋಗಲಾಡಿಸಲು ವಿಶೇಷ ಕಾರ್ಯಕ್ರಮ

» **ಮೊಳಕಾಲ್ಮುರು**


ಸರ್ವೋದಯ ಹಾಗೂ ಶ್ರೀ ಚೈತನ್ಯ ಪಬ್ಲಿಕ್ ಹೈಸ್ಕೂಲ್ ಶಾಲೆಯಿಂದ ಪಟ್ಟಣದಲ್ಲಿ ಇಂಗ್ಲಿಷ್ ಭಯ ಹೋಗಲಾಡಿಸಲು ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಪಠ್ಯ ಚಟುವಟಿಕೆಯನ್ನು ಪಠ್ಯೇತರ ಚಟುವಟಿಕೆಯನ್ನಾಗಿ ಮಾರ್ಪಡಿಸಿ ಸಾರ್ವಜನಿಕ ಸ್ಥಳಗಳಲ್ಲಿ ವಿದ್ಯಾರ್ಥಿಗಳಿಂದ ನೃತ್ಯ ಹಾಗೂ ವಿದ್ಯಾರ್ಥಿಗಳ ಮೂಲಕ ಚರ್ಚಾ ರಸ ಪ್ರಶ್ನೆಗಳನ್ನು ಸಾರ್ವಜನಿಕರಿಗೆ ಕೇಳಿ ಸಾರ್ವಜನಿಕರಿಗೆ ಶಾಲಾವತಿಯಿಂದ ಬಹುಮಾನವನ್ನು ವಿತರಿಸುವ ಮೂಲಕ ಕಲಿಕೆಯ ಮಹತ್ವವನ್ನು ತಿಳಿಸಲಾಯಿತು.

ಇಂಗ್ಲಿಷ್ ನ ಭಯದ ವಾತಾವರಣವನ್ನು ದೂರ ಮಾಡುವ ಉದ್ದೇಶದಿಂದ ಹಮ್ಮಿಕೊಂಡ ವಿನೂತನ ಕಾರ್ಯಕ್ರಮ ಇದಾಗಿದ್ದು, ಇದೇ ಸಂದರ್ಭದಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು. ಮಕ್ಕಳಿಗೆ ಸೂಕ್ತ ರಕ್ಷಣೆಯನ್ನು ಪಿಎಸ್ ಐ ಪಾಂಡುರಂಗಪ್ಪ ಹಾಗೂ ಸಿಬ್ಬಂದಿಯವರು ನೀಡಿ ಸಹಕರಿಸಿದರು, ಮಕ್ಕಳಿಗೆ ಓದುವ ಮತ್ತು ಪರೀಕ್ಷೆಗಳ ಬಗ್ಗೆ ಭಯವನ್ನು ಹೋಗಲಾ ಡಿಸುವುದೇ ಈ ಕಾರ್ಯಕ್ರಮದ ಉದ್ದೇಶವಾಗಿತ್ತು ಹಾಗೆಯೇ ಮಕ್ಕಳಿಗೆ ಕಲಿಕೆಯು ಎಷ್ಟು ಮುಖ್ಯವೂ ಎಂಬುದರ ಬಗ್ಗೆಯೂ ಸಹ ಅರಿವು ಮೂಡಿಸಲಾಯಿತು.



## ಅ.4.ರಂದು ಕಾನೂನು ಸಲಹಾ ಕೇಂದ್ರ ಉದ್ಘಾಟನೆ: ನ್ಯಾ.ಬೇನಾಳ



**ಹೊಸದುರ್ಗ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿ.ಪಂ. ತಾಲ್ಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ, ತಾ.ಪಂ, ಅಭಿಯೋಜನಾ ಇಲಾಖೆ, ಅರಣ್ಯ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ 'ಉಚಿತ ಕಾನೂನು ಸಲಹಾ ಕೇಂದ್ರದ ಉದ್ಘಾಟನಾ ಕಾರ್ಯಕ್ರಮ ಹಾಗೂ ಏಕ್ ಪೇಡ್ ಮಾ ಕೆ ನಾಮ್ ' ಕಾರ್ಯಕ್ರಮ ಅಕ್ಟೋಬರ್ 4.ರಂದು ಮಧ್ಯಾಹ್ನ 2ಕ್ಕೆ ತಾಲ್ಲೂಕಿನ ಬೋಕಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚನ್ನಸಮುದ್ರ (ಪುರ) ದಲ್ಲಿ ನಡೆಯಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ವೈ.ಕೆ. ಬೇನಾಳ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಪುಟ 2

**ಪ್ರಮುಖ ಸುದ್ದಿ**

# ಲೋಕಾಯುಕ್ತ ಎಡಿಜಿಪಿ ವಿರುದ್ಧ ಜೆಡಿಎಸ್ ಪ್ರತಿಭಟನೆ

» **ಚಿತ್ರದುರ್ಗ**

ಭ್ರಷ್ಟಚಾರ, ದುರ್ನಡತೆ ಮತ್ತು ಸುಲಿಗೆ ಮುಂತಾದ ಕ್ರಿಮಿನಲ್ ಕೇಸ್‌ನಲ್ಲಿ ಭಾಗಿಯಾಗಿರುವ ಕರ್ನಾಟಕ ಲೋಕಾಯುಕ್ತ ವಿಶೇಷ ತನಿಖಾದಳ ಮುಖ್ಯಸ್ಥ ಎಡಿಜಿಪಿ ಎಂ.ಚಂದ್ರಶೇಖರ್ ರವರನ್ನು ಕೂಡಲೇ ಭಾರತೀಯ ಸೇವೆಯಿಂದ ಅಮಾನತುಗೊಳಿಸಿ ಉನ್ನತಮಟ್ಟದ ತನಿಖೆ ನಡೆಸಿ ಶಿಸ್ತು ಕ್ರಮಕೈಗೊಳ್ಳಲು ಕೇಡರ್ ಸೆಂಟ್ರಲ್ ಪ್ರಾಧಿಕಾರಿಯಾಗಿರುವ ಕೇಂದ್ರ ಗೃಹ ಸಚಿವಾಲಯಕ್ಕೆ ಸೂಕ್ತ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರದ ಶಿಫಾರಸ್ಸಿನೊಂದಿಗೆ ಕಳುಹಿಸಲು ಒತ್ತಾಯಿಸಿ ಚಿತ್ರದುರ್ಗ ಜಿಲ್ಲಾ ಜನತಾದಳ (ಜಾತ್ಯಾತೀತ) ಒತ್ತಾಯಿಸಿದೆ.

ಚಿತ್ರದುರ್ಗ ನಗರದ ನೀಲಕಂಠೇಶ್ವರ ದೇವಾಲಯದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನೆಯನ್ನು ನಡೆಸಿದ ಜೆಡಿಎಸ್‌ನ ಮುಖಂಡರು, ಪದಾಧಿಕಾರಿಗಳು, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಮಾಡಿದರು. ದಾರಿಯುದ್ದಕ್ಕೂ ಭ್ರಷ್ಟ ಚಂದ್ರಶೇಖರರವರ ವಿರುದ್ಧವಾಗಿ ಘೋಷಣೆಗಳನ್ನು ಕೂಗಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಜಯಣ್ಣ.ಎಂ ಎಂ.ಚಂದ್ರಶೇಖರ್‌ರವರು ಕರ್ನಾಟಕ ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಭಾರತೀಯ ಪೋಲೀಸ್ ಸೇವೆಗೆ ಸೇರಿರುವ ಪೋಲೀಸ್ ಅಧಿಕಾರಿದ್ದು, ಮೂಲತಃ ಹಿಮಾಚಲ ಪ್ರದೇಶ ಐ.ಪಿ.ಎಸ್ ಕೇಡರ್‌ಗೆ ಸೇರಿದವರಾಗಿದ್ದು, ತದನಂತರ ತನ್ನ ಪತ್ನಿಯ ಅನಾರೋಗ್ಯ ಎಂದು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ರಾಜಕೀಯ ಪ್ರಭಾವವನ್ನು ಬೀರಿ ಕರ್ನಾಟಕ ರಾಜ್ಯಕ್ಕೆ ವರ್ಗಾವಣೆಗೊಂಡುಕರ್ನಾಟಕಐ.ಪಿ.ಎಸ್ ಕೇಡರ್‌ನಲ್ಲಿ ವಿಲೀನಗೊಂಡಿದರೆ, ಪ್ರಮುಖ ಆಯಾಕಟ್ಟಿನ ಮತ್ತು ಆರ್ಥಿಕವಾಗಿ, ಸದೃಢಗೊಳ್ಳುವಂತಹಭ್ರಷ್ಟಅಧಿಕಾರಿಯಾಗಿ ಬೆಂಗಳೂರು ಜಿಲ್ಲೆಯ ಪೋಲೀಸ್ ವರಿಷ್ಠಾಧಿಕಾರಿಯಾಗಿ, ಕಮೀಷನರ್‌ರಾಗಿ ವಲಯದ ಐ.ಜಿ.ಪಿ ಆಗಿ ಕರ್ತವ್ಯ ನಿರ್ವಹಿಸಿ ಭೂಗಳ್ಳರಿಗೆ, ವ್ಯಾಪಾರಸ್ಥರಿಗೆ, ಸಮಾಜಘಾತುಕರಾಗಿ, ಭ್ರಷ್ಟರ ಜೊತೆಗೆ ಭೂಗತ ಪಾತಕರ ಜೊತೆಗೆ ಶಾಮೀಲಾಗಿ ನೂರಾರು ಪ್ರಕರಣಗಳನ್ನು ತನಿಖೆ ಮಾಡದೆ ಭ್ರಷ್ಟ ಅಧಿಕಾರಿಯಾಗಿರುತ್ತಾರೆ. ಎಷ್ಟೋ ಉದ್ಯಮಿಗಳ ಮೇಲೆ ಸುಳ್ಳು ಪ್ರಕರಣಗಳನ್ನು ದಾಖಲಿಸಿ ಸಾಮಾನ್ಯ ನಾಗರೀಕರನ್ನು ಎದರಿಸಿ, ಬೆದರಿಸಿದ್ದಾರೆ ಎಂದು ದೂರಿದ್ದಾರೆ.




ಜೆಡಿಎಸ್‌ನರಾಜ್ಯಪ್ರಧಾನಕಾರ್ಯದರ್ಶಿ ಬಿ.ಕಾಂತರಾಜ್ ಮಾತನಾಡಿ ವಿಜಯ ಟಾಟಾ, ಇವರ ವಿರುದ್ಧ ಸುಮಾರು 500 ಪ್ರಕರಣಗಳು ದಾಖಲಾಗಿದ್ದು, ಅವರ ವಿರುದ್ಧ ಯಾವುದೇ ಕ್ರಮಕೈಗೊಳ್ಳದೇ ಅಧಿಕಾರಿಗಳ ನಿರ್ದೇಶನ ನೀಡಿರುವುದಾಗಿ ಸದರಿಯವರ ವಿರುದ್ಧ 2500 ಮೊಕದ್ದಮೆಗಳು ಇದ್ದರೂ ಸಹ ಯಾವುದೇ ಕಾನೂನು ಕ್ರಮ ಜರುಗಿಸಿರುವುದಿಲ್ಲ. ಅನೇಕ ಪ್ರಕರಣಗಳಲ್ಲಿ ಅನೇಕ ಪೋಲೀಸ್ ಅಧಿಕಾರಿಗಳನ್ನು ತನ್ನ ಅಧಿಕಾರ ದರ್ಪದಿಂದ ಡಿವೈಎಸ್‌ಪಿ, ಪಿ.ಎಸ್.ಐ ಗಳ ಮೂಲಕ ಸುಳ್ಳು ಪ್ರಕರಣಗಳನ್ನು ದಾಖಲಿಸಿ. ಲಪಾಟಿಯಿಸಿದ್ದಾರೆ. ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿರವರು ಬೆಂಗಳೂರು ನಗರದಲ್ಲಿ ಸುದ್ದಿಗೋಷ್ಟಿಯನ್ನು ನಡೆಸಿ ರಾಜ್ಯಪಾಲರು ಲೋಕಾಯುಕ್ತ ಕಛೇರಿಯಲ್ಲಿ ತನಿಖೆಗೆ ಬಾಕಿ ಉಳಿದಿರುವ ಪ್ರಕರಣಗಳ ಬಗ್ಗೆ ಮಾಹಿತಿ ಮತ್ತು ವಿಚಾರಣೆಯನ್ನು ಬಯಸಿದ್ದಾರೆ. ಈ ಸಂಗತಿ ಬಯಲಾಗಿದ್ದು, ರಾಜ್ಯ ಸರ್ಕಾರದಿಂದ ವಿವರಣೆ ಕೇಳಿದ ಹಿನ್ನಲೆಯನ್ನು ಗಮನದಲ್ಲಿಟ್ಟುಕೊಂಡು ಈ ಮಾಹಿತಿ ರಾಜ್ಯ ಭವನದಿಂದ ಸೋರಿಕೆಯಾಗಿದೆ ಎನ್ನುವ ಆರೋಪವನ್ನು ಏರಿ ರಾಜ್ಯಪಾಲರ ಕಛೇರಿ ಮೇಲೆ ತನಿಖೆ ನಡೆಸುವ ದರ್ಪ ಮೆರೆದಿದ್ದ, ಎಂ.ಚಂದ್ರಶೇಖರ್, ಲೋಕಾಯುಕ್ತ ಎ.ಡಿ.ಜಿ.ಪಿ ವಿರುದ್ಧ ಮಾತನಾಡಿದ್ದರು. ಭ್ರಷ್ಟಚಾರ ಮತ್ತು ಲಂಚ ನಿರ್ಮೂಲನೆ ಬಗ್ಗೆ ತನಿಖೆ ನಡೆಸುವ ಲೋಕಾಯುಕ್ತ ಸಂಸ್ಥೆಯಲ್ಲಿ ಕೆಲ ಸುಲಿಗೆಕೋರ ಮತ್ತು ಭ್ರಷ್ಟ ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ ಎಂದು ಆರೋಪ ಮಾಡಿದರು.

ಪುಟ 2

## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಎಡಿಜಿಪಿ ವಿರುದ್ಧ ಜೆಡಿಎಸ್ ಪ್ರತಿಭಟನೆ

» ಮೊದಲ ಪುಟದಿಂದ

ದಾವಣಗೆರೆ ಜಿಲ್ಲಾ ಉಸ್ತುವಾರಿಗಳಾದ ಡಿ.ಯಶೋಧರ ಮಾತನಾಡಿ ಹೆಚ್.ಡಿ.ಕುಮಾರಸ್ವಾಮಿ ರವರ ಆರೋಪಗಳನ್ನು ಗಮನದಲ್ಲಿಟ್ಟುಕೊಂಡು ಎಂ.ಚಂದ್ರಶೇಖರರವರು ಎಸ್.ಐ.ಟಿ ಸದಸ್ಯರಿಗೆ ಬರೆದಿರುವ ಪತ್ರದಲ್ಲಿ ಹೆಚ್.ಡಿ.ಕುಮಾರಸ್ವಾಮಿಯವರ ವಿರುದ್ಧ ಅಸಭ್ಯ ಮತ್ತು ಅವಾಚ್ಯ ಶಬ್ದಗಳಾದ ಹಂದಿಗಳ ಜೊತೆ ಗುದ್ದಾಡಬೇಡಿ, ಏಕೆಂದರೆ ಹಂದಿಗಳಂತೆ ನೀವು ಕೊಳಕಾಗುತ್ತೀರಿ ಎಂಬ ನುಡಿಗಳನ್ನು ಬಳಸಿದ್ದಾರೆ. ಎ.ಡಿ.ಜಿ.ಪಿ ಎಂ.ಚಂದ್ರಶೇಖರ್‌ರವರು ಸರ್ಕಾರದ ಕೆಲಸವನ್ನು ದುರುಪಯೋಗ ಪಡಿಸಿಕೊಂಡು ಉನ್ನತ ಮಟ್ಟದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಲೋಕಾಯುಕ್ತ ಇಲಾಖೆಗೆ ಅವಮಾನ ಮಾಡಿರುವ ಭ್ರಷ್ಟ ಅಧಿಕಾರಿಯನ್ನು ಕೇಂದ್ರ ಸರ್ಕಾರ ಉನ್ನತ ಮಟ್ಟದ ತನಿಖೆ ನಡೆಸಿ ಶಿಸ್ತು ಕ್ರಮಕೈಗೊಂಡು ಇವರನ್ನು ಭಾರತೀಯ ಸೇವೆಯನ್ನು ಅಮಾನತುಗೊಳಿಸಿ ಇವರ ವಿರುದ್ಧ ತನಿಖೆ ನಡೆಸಿ, ಕ್ರಿಮಿನಲ್ ಪ್ರಕರಣ ದಾಖಲು ಮಾಡಿ ಕಾನೂನು ರೀತಿ ಕ್ರಮಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೋಪಾಲಸ್ವಾಮಿ ನಾಯಕ,ಜಿಲ್ಲಾ ಉಪಾಧ್ಯಕ್ಷರಾದ ವೀರಣ್ಣ, ತಾಲ್ಲೂಕು ಅಧ್ಯಕ್ಷರಾದ ಸಣ್ಣ ತಿಮ್ಮಣ್ಣ ಯುವ ಘಟಕದ ಜಿಲ್ಲಾಧ್ಯಕ್ಷರಾದ ಪ್ರತಾಪ್ ಜೋಗಿ ಕಾರ್ಯಾಧ್ಯಕ್ಷರಾದ ಜೆ.ಬಿ.ಶೇಖರ್ ನಗರಸಭೆ ಸದಸ್ಯರಾದ ದೀಪು, ನಸರುಲ್ಲಾ ವಿದ್ಯಾರ್ಥಿ ಘಟಕ ಜಿಲ್ಲಾಧ್ಯಕ್ಷ ಅಬು ವೀರಭದ್ರಣ್ಣ ಕರಿಬಸಪ್ಪ ಮಂಜಣ್ಣ ರುದ್ರಣ್ಣ ಸೇರಿದಂತೆ ಜೆಡಿಎಸ್ ನ ಪದಾಧಿಕಾರಿಗಳು ಅಭಿಮಾನಿಗಳು ಹಿತೈಷಿಗಳು ಪ್ರತಿಬಟೆಯಲ್ಲಿ ಭಾಗವಹಿಸಿದ್ದರು.

### ಇಂಗ್ಲಿಷ್ ಭಯ ಹೋಗಲಾಡಿಸಲು ವಿಶೇಷ ಕಾರ್ಯಕ್ರಮ



» ಮೊದಲ ಪುಟದಿಂದ

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿಗಳಾದ ವನಿತಾ ಗಿರೀಶ್ ಶಾಲೆಯ ಮುಖ್ಯೋಪಾಧ್ಯಾಯರಾದ ಉಮೇಶ್ ಮತ್ತು ಶಶಿ, ಗೀತಾ, ಭಾಗ್ಯ, ರೂಪ, ಕಲ್ಪನಾ, ಜುಹಿ ನಾಜ್, ತಿಪ್ಪೇಸ್ವಾಮಿ ,ವನಜ, ಅನಿತ, ವೀಣಾ, ಫರ್ಜನ, ನೇತ್ರಮ್ಮ, ಮಂಜಮ್ಮ, ಮಂಜುಳಾ,ರಂಜಿತ, ಅರ್ಪಿತ, ನುಸರತ್, ಸಾದಿಯ, ಜ್ಯೋತಿ ,ಸಮ್ರಿನ್, ನಿಖಾತ್, ಶ್ರೇಯ, ಹಾಗೂ ಶಾಲೆಯ ವಾಹನ ಚಾಲಕರು,ಆಯಗಳು ಶಾಲೆಯ ಕಾರ್ಯದರ್ಶಿಗಳಾಗಿರುವ ಶ್ರೀಮತಿ ವನಿತಾ ಗಿರೀಶ್, ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಮಕ್ಕಳೊಂದಿಗೆ ಭಾಗವಹಿಸಿದ್ದರು.

### ಅ.4.ರಂದು ಕಾನೂನು ಸಲಹಾ ಕೇಂದ್ರ ಉದ್ಘಾಟನೆ: ನ್ಯಾ.ಬೇನಾಳ

» ಮೊದಲ ಪುಟದಿಂದ

ಗ್ರಾಮೀಣ ಪ್ರದೇಶಗಳಲ್ಲಿನ ಜನರಿಗೆ ಉಚಿತ ಕಾನೂನು ಅರಿವು ಮೂಡಿಸಲಾಗುತ್ತದೆ. ವಕೀಲರೊಬ್ಬರು ಸ್ಥಳದಲ್ಲಿಯೇ ಇದ್ದು, ಈ ಬಗ್ಗೆ ವಾರದಲ್ಲಿ ಎರಡು ದಿನ ಮಾಹಿತಿ ನೀಡುವರು. ಲಭ್ಯವಿರುವ ಸಮಯವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ, ಜಿ.ಪಂ. ಸಿಇಓ ಎಸ್.ಜೆ. ಸೋಮಶೇಖರ್, ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಎಂ. ವಿಜಯ, ಹೊಸದುರ್ಗ ಜೆ.ಎಂ.ಎಫ್.ಸಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಸಿ.ಪ್ರಸನ್ನ ಕುಮಾರ್, ಅಪರ ಸಿವಿಲ್ ನ್ಯಾಯಾಧೀಶರಾದ ತ್ರಿನೇತ್ರ ಎಂ.ಎನ್, ವಕೀಲರ ಸಂಘದ ಅಧ್ಯಕ್ಷ ಎಚ್.ಬಿ. ರವಿಕುಮಾರ್, ಉಪಾಧ್ಯಕ್ಷ ಜಗದೀಶ್ ನಾಯಕ್, ಕಾರ್ಯದರ್ಶಿ ಇ.ಟಿ. ರಮೇಶ್, ಸಹಾಯಕ ಸರ್ಕಾರಿ ಅಭಿಯೋಜಕರಾದ ಶಶಿಕಲಾ, ತಾ.ಪಂ. ಇಒ ಬಿ.ಸುನೀಲ್, ವಲಯ ಅರಣ್ಯಾಧಿಕಾರಿ ಸುನೀಲ್ ಕುಮಾರ್ ಎ.ಬೋಕಿಕೆರೆ ಅಧ್ಯಕ್ಷೆ ರಂಗಮ್ಮ ಆರ್. ಕರಿಯಪ್ಪ, ಪಿಡಿಒ ಜಯಣ್ಣ ಬಿ.ಆರ್.ಪ್ಯಾನಲ್ ವಕೀಲರಾದ ಆರ್. ಯುವರಾಜ್ ಭಾಗವಹಿಸುವರು ಎಂದು ಮಾಹಿತಿ ನೀಡಿದರು.

### ಮಾರಾಟ ಕೇಂದ್ರಗಳಿಗೆ ಪರವಾನಗಿ

» ಚಿತ್ರದುರ್ಗ

ಕುಕ್ಕುಟ ಮತ್ತು ಪಶು ಆಹಾರ ಉತ್ಪಾದನೆ ಮತ್ತು ಮಾರಾಟ ಕೇಂದ್ರಗಳಿಗೆ ಪರವಾನಗಿ (ಲೈಸನ್ಸ್) ಪಡೆದುಕೊಳ್ಳಬಹುದಾಗಿದೆ ಎಂದು ಪಶು ವೈದ್ಯಕೀಯ ಪಾಲಿಕ್ಲಿನಿಕ್ ಪರವಾನಗಿ ಪ್ರಾಧಿಕಾರ ಮತ್ತು ಉಪನಿರ್ದೇಶಕ ಡಾ.ಎನ್,ಎಸ್.ಹರೀಶ್ ತಿಳಿಸಿದ್ದಾರೆ.

# ಧರ್ಮಸ್ಥಳ ಸಂಘ ನೂರಾರು ಕುಟುಂಬಗಳಿಗೆ ಸ್ವಾವಲಂಬಿ ಬದುಕು ಕಲ್ಪಿಸಿದೆ: ಬಸವರಾಜ್

» ಹೊಸದುರ್ಗ

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ವಾತ್ಸಲ್ಯ ಯೋಜನೆ, ಮದ್ಯವರ್ಜನ ಶಿಬಿರ ಹಾಗೂ ಇನ್ನೂ ಹಲವಾರು ಯೋಜನೆಗಳ ಪರಿಣಾಮ ಗ್ರಾಮೀಣ ಭಾಗದ ಜನರು ಮತ್ತು ಬಡ ಜನರು ಬದುಕು ಸುಧಾರಿಸಿಕೊಂಡಿದ್ದಾರೆ. ಅಲ್ಲದೇ, ನೂರಾರು ಕುಟುಂಬಗಳು ಸ್ವಾವಲಂಬನೆಯಿಂದ, ನೆಮ್ಮದಿಯಾಗಿ ಜೀವನ ನಡೆಸುವಂತಾಗಿದೆ ಎಂದು ಚಿತ್ರದುರ್ಗ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ತುಂಬಿನಕೆರೆ ಬಸವರಾಜ್ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ರಾಧಾಕೃಷ್ಣ ಕಲ್ಯಾಣ ಮಂಟಪದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಹಾಲು ರಾಮೇಶ್ವರ ಯೋಜನಾ ಘಟಕದ ವತಿಯಿಂದ ಮಂಗಳವಾರ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಒಕ್ಕೂಟ ಪದಾಧಿಕಾರಿಗಳ ಸಮಾವೇಶ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.



ಪರಮಪೂಜ್ಯ ಡಾ. ವೀರೇಂದ್ರ ಹೆಗ್ಗಡೆ ಅವರು 'ಬದುಕಿನಲ್ಲಿ ಸಮಸ್ಯೆಗಳು ಬಂದಾಗ ಕುಗ್ಗದೇದೃಢನಂಬಿಕೆ,ಆತ್ಮವಿಶ್ವಾಸದೊಂದಿಗೆ ಮುನ್ನಡೆದಾಗ ಸಮಸ್ಯೆಗಳು ಮಂಜಿನ ತರಹ ಮಾಯವಾಗುತ್ತವೆ.' ಎಂಬ ಅವರ ಮಾತುಗಳು ಸರ್ವಕಾಲಕ್ಕೂ ಸತ್ಯ. ನಾವು ಎಷ್ಟೇ ಒಳ್ಳೆಯ ಕಾರ್ಯಗಳನ್ನು ಮಾಡಿದರು ಟೀಕಾಕಾರರು ಇದ್ದೇ ಇರುತ್ತಾರೆ. ಅಂತಹವುಗಳನ್ನು ಮನಸ್ಸಿಗೆ ತೆಗೆದುಕೊಳ್ಳದೆ, ನಮ್ಮ ಗುರಿಯ ಕಡೆಗೆ ನಮ್ಮ ಗಮನವಿರಬೇಕು. ಬೆರಳೆಣಿಕೆಯ ಕೆಲವರು ಧರ್ಮಸ್ಥಳ ಸಂಸ್ಥೆಯ ಹೆಸರು ಹಾಳು ಮಾಡುವ ಕೆಲಸ ಮಾಡುತ್ತಿದ್ದಾರೆ. ಯಾವುದೇ ಕಾರಣಕ್ಕೂ ಅದು ಅವರಿಗೆ ಫಲಪ್ರದವಾಗುವುದಿಲ್ಲ. ಸಂಘ ಯಾವುದೇ ಸ್ವಾರ್ಥವಿಲ್ಲದೆ, ನಿಸ್ವಾರ್ಥವಾಗಿ ಸೇವೆ ಸಲ್ಲಿಸುತ್ತಿದೆ ಎಂದು ಹೇಳಿದರು.

ಸಮಾಜ ಸೇವಕ, ಕೆಪಿಸಿಸಿ ಸದಸ್ಯ ಅಲ್ತಾಫ್ ಪಾಷಾ ಮಾತನಾಡಿ, ಧರ್ಮಸ್ಥಳ ಸಂಘ ಜಾತ್ಯಾತೀತವಾಗಿ ಯಾವುದೇ ಭೇದವಿಲ್ಲದೆ, ಜನರ ಕಲ್ಯಾಣ ಕಾರ್ಯಕ್ರಮಗಳನ್ನು ಮಾಡುತ್ತಾ ಬರುತ್ತಿದೆ. ಜನರಲ್ಲಿ ನಿರಂತರವಾಗಿ ಸದ್ವಿಚಾರ-ಸದ್ಭಾವನೆಗಳನ್ನು ಬೆಳೆಸುತ್ತಿದೆ. ದುಶ್ಚಟಗಳಿಗೆ ಬಲಿಯಾಗಿರುವ ಜನರನ್ನು ಬದಲಾಯಿಸಿ ಒಳ್ಳೆಯ ಜೀವನಕ್ಕೆ ಕರೆತರುತ್ತಿದೆ. ಸಂಘದ ಕಾರ್ಯಕ್ರಮಗಳಿಗೆ ನಮ್ಮ ನಿರಂತರ ಸಹಕಾರವಿರುತ್ತದೆ ಎಂದು ತಿಳಿಸಿದರು.

ಈ ವೇಳೆ ಕಾರ್ಯಕ್ರಮದಲ್ಲಿ ಬ್ಯಾಂಕ್ ಆಫ್ ಬರೋಡ ಹೊಸದುರ್ಗ ಶಾಖೆಯ ಹಿರಿಯ ವ್ಯವಸ್ಥಾಪಕ ಶೇಷ ನಾಯ್ಕ್, ಸಂಘದ ಜಿಲ್ಲಾ ಕಚೇರಿ ಹಿರಿಯೂರು ವಿಭಾಗದ ಹಿರಿಯ ನಿರ್ದೇಶಕ ವಿನಯ್ ಕುಮಾರ್ ಸುವರ್ಣ, ಹೊಸದುರ್ಗ ತಾಲ್ಲೂಕು ವಿಭಾಗದ ಯೋಜನಾಧಿಕಾರಿ ಶಿವಣ್ಣ ಮತ್ತು ಹಾಲು ರಾಮೇಶ್ವರ ವಿಭಾಗದ ಯೋಜನಾಧಿಕಾರಿ ಚಂದ್ರಶೇಖರ್ ಸೇರಿದಂತೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

## ಮಾಸಿಕ ಗಮಕ ನಿವೇದನೆಯ 14ನೇ ಅಧಿವೇಶನ

» ಚಿತ್ರದುರ್ಗ

ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘವು ತನ್ನ ಹುಟ್ಟಿದ 40ನೇ ವರ್ಷಾಚರಣೆಯ ಸಂದರ್ಭದಲ್ಲಿ ಏರ್ಪಡಿಸಿದ್ದ ಮಾಸಿಕ ಗಮಕ ನಿವೇದನೆಯ 14ನೇ ಅಧಿವೇಶನವನ್ನು ಇಲ್ಲಿನ ಶ್ರೀ ರಾಘವೇಂದ್ರ ಗುರು ಸಾರ್ವಭೌಮರ ಮಠದ ಪ್ರಾಂಗಣದಲ್ಲಿ ನಡೆಸಿಕೊಟ್ಟಿತು.

ಕುಮಾರವ್ಯಾಸ ಭಾರತದ ರಸಘಟ್ಟಿಯಾದ ಕಾವ್ಯ ಭಾಗ ಕುರುಕ್ಷೇತ್ರ ಯುದ್ಧದ ಸಂದಾನ ಸನ್ನಾಹ ಎಂಬ ಪ್ರಸಂಗದ ವಾಚನ ಮತ್ತು ವ್ಯಾಖ್ಯಾನಗಳನ್ನು ಗಮಕಿಗಳಾದ ಅನಂತ ಕೃಷ್ಣ ಮತ್ತು ಚಂಪಕಾ ಶ್ರೀಧರ್ ನಡೆಸಿಕೊಟ್ಟರು. ಯುದ್ಧ ಪೂರ್ವದಲ್ಲಿ ಶ್ರೀ ಕೃಷ್ಣನ ನೇತೃತ್ವದಲ್ಲಿ ವಿಚಾರ ವಿನಿಮಯ ನಡೆದಾಗ ಧರ್ಮರಾಯ ಅರ್ಜುನ ಮತ್ತು ನಕುಲ ಸಂಧಾನವೇ ಸಾಕು ಎಂದಾಗ, ಭೀಮ ಮತ್ತು ಸಹದೇವ ಮೌನ ಸಮ್ಮತಿ ಸೂಚಿಸುತ್ತಿದ್ದಾಗ ಕೆರಳಿದ ದ್ರೌಪದಿಯು ಪತಿಗಳ



ನಿಲುವನ್ನು ಕಟುವಾಗಿ ಝುಂಕಿಸಿ ತಾನು ಅಭಿಮನ್ಯು ಘಟೋದ್ಗಜ ಮತ್ತು ತನ್ನ ತಂದೆ ದ್ರುಪದನ ನೆರವಿನಿಂದ ಯುದ್ಧ ಮಾಡಿ ಕ್ಷತ್ರೀಯ ರಮಣೀಯಂತೆ ಯುದ್ಧದಲ್ಲಿ ಪ್ರಾಣಾರ್ಪಣೆ ಮಾಡುವುದಾಗಿ ಹೇಳಿ ಎಲ್ಲರನ್ನೂ ಯುದ್ಧ ಪ್ರಸಕ್ತಿಯಲ್ಲಿ ತೊಡಗುವಂತೆ ಪ್ರೇರೇಪಿಸಿದ ಕಥಾ ಭಾಗವನ್ನು ಗಮಕ ಕಲಾವಿದರು ಅತ್ಯಂತ ಪರಿಣಾಮಕಾರಿಯಾಗಿ ಮನೋಭೂಮಿಕೆ ಮೇಲೆ ಮೂಡಿಸಿದರು.

ಸಂಘದ ಅಧ್ಯಕ್ಷ ಶ್ರೀಮತಿ ರಮಾದೇವಿ. ಕೆ. ವೆಂಕಣ್ಣಚಾರ್ ಅವರು ಮಾತನಾಡಿ ಕನ್ನಡದ ಕುಮಾರವ್ಯಾಸ ಭಾರತದಂತಹ ಉದ್ದಾಮ ಕಾವ್ಯಗಳನ್ನು ಮಕ್ಕಳಿಗೆ ಗಮಕಲೆಯ ಮೂಲಕ ಪರಿಚಯಿಸಿದರೆ ಕನ್ನಡವನ್ನು ಉಳಿಸಿ ಬೆಳೆಸುವ ಯೋಚನೆ ಫ಼ಲಪ್ರದವಾಗುವುದರಲ್ಲಿ ಅನುಮಾನವಿಲ್ಲ ಎಂದರು.

ಸಮಾರಂಭವು ಜೆಸಿಆರ್ ಬಡಾವಣೆಯ ಮಾರುತಿ ಭಜನಾ ಮಂಡಳಿಯವರು ಗಮಕ ಪ್ರಾರ್ಥನೆ ಮಾಡಿದರು ಸಂಘದ ನಿರ್ದೇಶಕಿ ಸುಶೀಲ ಪ್ರಸಾದ್ ಸ್ವಾಗತಿಸಿದರೆ ಮತ್ತೋರ್ವ ನಿರ್ದೇಶಕಿ ಬಿ.ಎಲ್ ಉಮಾ ವಂದನಾರ್ಪಣೆ ಮಾಡಿದರು.ಶಶಿಧರಶ್ಯಾನುಭೋಗ್ ಕಾರ್ಯಕ್ರಮ ನಿರ್ವಹಿಸಿದರು.

ಮುಂದಿನ ಮಾಸಿಕ ಗಮಕ ಕಾರ್ಯಕ್ರಮವು ದಿನಾಂಕ 27-10-2024 ಭಾನುವಾರ ಸಂಜೆ 6 ಗಂಟೆಗೆ ನಗರದ ಜೆಸಿಆರ್ ಗಣಪತಿ ದೇವಾಲಯದ ಪ್ರಾಂಗಣದಲ್ಲಿ ಲಕ್ಷ್ಮೀಶ ಕವಿಯ ಜೈಮಿನಿ ಭಾರತದ "ಬಕದಾಲ್ಭ್ಯ ಮುನಿಯ ವೃತ್ತಾಂತ" ಎಂಬ ಪ್ರಸಂಗವನ್ನು ಬೆಂಗಳೂರಿನ ಗಮಕಿಗಳಾದ ಎಂ.ಆರ್. ಸತ್ಯನಾರಾಯಣ ಮತ್ತು ಟಿ .ಎಸ್. ಸುಬ್ರಮಣ್ಯ ಭಟ್ಟ ಅವರು ವಾಚನ ಮತ್ತು ವ್ಯಾಖ್ಯಾನ ನಡೆಸಿಕೊಡಲಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

## ವಲಯ ಹಾಗೂ ಕ್ಲಸ್ಟರ್ ಮಟ್ಟದ ಕ್ರೀಡಾಕೂಟದಲ್ಲಿ ಶ್ರೀ ಸೋಮೇಶ್ವರ ವಿದ್ಯಾಲಯ ವಿದ್ಯಾರ್ಥಿಗಳ ಸಾಧನೆ



» ದಾವಣಗೆರೆ

ಶಿಕ್ಷಣ ಇಲಾಖೆ ಹಮ್ಮಿಕೊಂಡಿದ್ದ 2024-25ನೇ ಸಾಲಿನ ಕ್ಲಸ್ಟರ್ ಮಟ್ಟದ ಹಿರಿಯ ಪ್ರಾಥಮಿಕ ಶಾಲೆ ವಿಭಾಗ ಪ್ರೌಢ ಶಾಲಾ ಹಂತದ ವೈಯುಕ್ತಿಕ ಕ್ರೀಡಾಕೂಟದಲ್ಲಿ ನಗರದ ಪ್ರತಿಷ್ಠಿತ ಶಾಲೆಗಳಲ್ಲೊಂದಾದ ಶ್ರೀ ಸೋಮೇಶ್ವರ ವಿದ್ಯಾಲಯದ ವಿದ್ಯಾರ್ಥಿಗಳು ಅಮೋಘ ಸಾಧನೆ ಮಾಡಿ ಕೀರ್ತಿ ತಂದಿದ್ದಾರೆ. ಪ್ರೌಢ ಶಾಲಾ ಹಂತದ ವೈಯಕ್ತಿಕ ಕ್ರೀಡೆಗಳಾದ ಹರ್ಡಲ್ಸ್ ಉದ್ದ ಜಿಗಿತದಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದಿದ್ದಾರೆ. 400, 800 ಹಾಗೂ ಸರಪಳಿ, ಓಟ, ಚಕ್ರ ಎಸೆತದಲ್ಲಿ ತಲಾ ಪ್ರಥಮ ದ್ವಿತೀಯ ಬಹುಮಾನಗಳನ್ನು ಪಡೆದು ಅಮೋಘ ಸಾಧನೆ ಮಾಡಿ ಕ್ರೀಡಾ ಕಲಿಗಳಾಗಿ ಹೊರಹೊಮ್ಮಿದ್ದಾರೆ. ಇನ್ನು ಕ್ಲಸ್ಟರ್ ಮಟ್ಟದ ಬಾಲಕರ ವಿಭಾಗದ ಎತ್ತರ ಜಿಗಿತದಲ್ಲಿ ಪ್ರಥಮ ಹಾಗೂ ದ್ವಿತೀಯ ಬಹುಮಾನ ಪಡೆದರೆ ರಿಲೇ ಉದ್ದ ಜಿಗಿತ, ಗುಂಡು ಎಸೆತ ಎತ್ತರ ಜಿಗಿತ ಹಾಗೂ 600 ಮೀಟರ್ ಓಟದ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಬಹುಮಾನ ಪಡೆದು ಬಾಲಕಿಯರ ಕ್ರೀಡಾ ಕ್ಷೇತ್ರದಲ್ಲಿ ತಮ್ಮದೆಯಾದ ಛಾಪು ಮೂಡಿಸಿದ್ದಾರೆ. ಉಳಿದಂತೆ ಗುಂಪು ಆಟಗಳಾದ ವಾಲಿಬಾಲ್, ಥ್ರೋ ಬಾಲ್ ಹಾಗೂ ಖೋ ಖೋ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಬಹುಮಾನ ಪಡೆದಿದ್ದಾರೆ. ತಾಲ್ಲೂಕು ಹಂತದಲ್ಲಿ 400 ಮೀಟರ್ ಹರ್ಡಲ್ಸ್, ಗುಂಡು ಎಸೆತ ಚದುರಂಗ, ಕರಾಟೆ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಬಹುಮಾನ ಪಡೆದಿದ್ದಾರೆ. ಚದುರಂಗದಲ್ಲಿ ದೀಕ್ಷಿತ್, ಶಶಾಂಕ್, ದೀಕ್ಷಿತ ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಹರ್ಡಲ್ಸ್ ನಲ್ಲಿ ಸಾಗರ್, 400 ಮೀಟರ್ ಓಟದಲ್ಲಿ ಚಿರಂತನ ಹಾಗೂ ಗುಂಡು ಎಸೆತದಲ್ಲಿ ನವ್ಯ ಸಿ ಜಿಲ್ಲಾಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ಮೂಲಕ ಶಾಲೆಗೆ ಮತ್ತು ಪೋಷಕರಿಗೆ ಕೀರ್ತಿ ತಂದ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿ ಪ್ರೋತ್ಸಾಹಿಸಲಾಯಿತು. ಈ ವೇಳೆ ಶಾಲೆಯ ಪ್ರಾಂಶುಪಾಲರಾದ ಎನ್ ಪ್ರಭಾವತಿ, ಶೈಕ್ಷಣಿಕ ನಿರ್ದೇಶಕರಾದ ಪರಮೇಶ್ವರಪ್ಪ ಮುಖ್ಯ ಶಿಕ್ಷಕರು, ದೈಹಿಕ ಶಿಕ್ಷಕಿಯಾದ ಇಂದ್ರಮ್ಮ, ರಾಹುಲ್ ಹಾಗೂ ಶರ್ಮಿಳಾ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಪ್ರತಿಯೊಬ್ಬರು ಪರಿಸರ ಕಾಪಾಡಲು ಸ್ವಚ್ಛತೆಗೆ ಹೆಚ್ಚು ಒತ್ತು ನೀಡಬೇಕು

» ಹೊಳಲ್ಕೆರೆ

ಆರೋಗ್ಯವಂತ ಸಮಾಜ ಕಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಶುದ್ಧ ಪರಿಸರವನ್ನು ಕಾಪಾಡಲು ಸ್ವಚ್ಛತೆಗೆ ಹೆಚ್ಚು ಒತ್ತು ನೀಡಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ರಘುರಾಮ್ ತಿಳಿಸಿದರು. ಅವರು ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ವಕೀಲರ ಸಂಘ ಪುರಸಭೆಯ ಸಹಯೋಗದಲ್ಲಿ ಕೈಗೊಂಡಿದ್ದ ಸ್ವಚ್ಛತಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ನಾವು ನಿತ್ಯವೂ ಪರಿಸರವನ್ನು ಸಂರಕ್ಷಣೆ ಮಾಡಬೇಕು. ಪರಿಸರವನ್ನು ಸಂರಕ್ಷಣೆ ಮಾಡಿದ್ದಲ್ಲಿ ಮಾತ್ರ ಹೆಚ್ಚು ಸುರಕ್ಷಿತವಾಗಿರಲು ಸಾಧ್ಯ. ಮನೆಯ ಸುತ್ತಮುತ್ತ ಗಿಡಮರಗಳನ್ನು ಬೆಳೆಸಬೇಕೆಂದರು.ಪ್ರಧಾನ ಸಿವಿಲ್ ನ್ಯಾಯಾಧೀಶ ಎಂ.ಪಿಉಮೇಶ್ ಮಾತನಾಡಿ, ನಾವು ಇರುವ ಜಾಗ, ಬದುಕುವ ಪರಿಸರ ಸ್ವಚ್ಛತೆ ಇರಬೇಕು. ಎಲ್ಲವನ್ನೂ ಸರಕಾರದ ವ್ಯವಸ್ಥೆಗೆ ಅವಲಂಬಿಸಿದೆ ನೆಲ, ಜಲ,ಪ್ರಕೃತಿಯ ಸಂರಕ್ಷಣೆ ನಮ್ಮ ಕರ್ತವ್ಯ ಅಗಬೇಕೆಂದರು.ಅಪರ ಸಿವಿಲ್ ನ್ಯಾಯಾಧೀಶರಾದ ನಿರುಪಮಾ ರೇಣುಕಪ್ಪ ಡಂಗ ಮಾತನಾಡಿ, ಪ್ರಕೃತಿ



ಸಾಕಷ್ಟು ವಿಸ್ಮಯಕಾರಿ. ಅಲ್ಲಿನ ಸೌಕರ್ಯಗಳನ್ನು ಸದ್ಬಳಕೆ ಮಾಡಿಕೊಳ್ಳುವ ಜತೆ ಸಂರಕ್ಷಣೆ ನಮ್ಮ ಕರ್ತವ್ಯ. ನಿತ್ಯವೂ ಪೂಜಿಸುವ ಪ್ರಕೃತಿಯಲ್ಲಿ ನೀರು, ಗಾಳಿ, ಬೆಳಕು ಎಲ್ಲವೂ ಸಿಕ್ಕಲಿದೆ. ಅವಿಲ್ಲದೆ ಬದುಕಿಲ್ಲ ಎಂದರು.ಸರಕಾರಿ ಅಭಿಯೋಜಕ ಜಿ.ಎಚ್.ಶಿವಕುಮಾರ್, ವಕೀಲ ಎಸ್.ವೇದಮೂರ್ತಿ, ಶಿರಸ್ಥೇದಾರ್ ಅನಿತಾ, ಪುರಸಭೆ ಅರೋಗ್ಯಾಧಿಕಾರಿ ಶೌಕತ್, ಪ್ರಶಾಂತ್, ಕಿಶೋರ್, ಪೌರಕಾರ್ಮಿಕರು, ನ್ಯಾಯಾಲಯದ ಸಿಬ್ಬಂದಿ ಸ್ವಚ್ಛತೆ ಯಲ್ಲಿ ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ನಿವೃತ್ತ ನೌಕರರಿಗೆ ಪರಿಷ್ಕೃತ ವೇತನ ನೀಡುವಂತೆ ಪ್ರತಿಭಟನೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ನಿವೃತ್ತ ನೌಕರರ ವೇದಿಕೆ ಚಿತ್ರದುರ್ಗ ಜಿಲ್ಲಾ ಘಟಕದವತಿಯಿಂದ : 1-7-2022ರಿಂದ 31-7-2024ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಡಿ.ಸಿ.ಆರ್.ಜಿ. ಕಮ್ಯುಟೇಶನ್, ಗಳಿಕೆ ರಜೆ ನಗದೀಕರಣದ ಮೊತ್ತವನ್ನು ಏಳನೇ ವೇತನ ಆಯೋಗದ ಲೆಕ್ಕಾಚಾರದಲ್ಲಿ ನೀಡಬೇಕೆಂದು ಹಾಗೂ ಪರಿಷ್ಕೃತ ಆದೇಶ ಹೊರಡಿಸಬೇಕೆಂದು ಆಗ್ರಹಿಸಿ ಇಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಕಪ್ಪು ಪಟ್ಟಿಯನ್ನು ಧರಿಸಿ ಧರಣಿ ಸತ್ಯಾಗ್ರಹವನ್ನು ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ರಾಜ್ಯ ಮಹಾಪ್ರಧಾನ ಸಂಚಾಲಕರಾದ ಎಂ.ಪಿ.ಎಂ.ಷಣ್ಮುಖಯ್ಯ ದಿನಾಂಕ 01-07-2022 ರಿಂದ 31-07-2024 ರ ಅವಧಿಯಲ್ಲಿ ನಿವೃತ್ತರಾದ, ನಿಧನರಾದ ಅಧಿಕಾರಿಗಳೂ ಹಾಗೂ ನೌಕರರಿಗೂ ಸಹ ದಿನಾಂಕ : 01-07-2022 ರಿಂದ ವೇತನ ನಿಗದಿಗೊಳಿಸಿ ನಿವೃತ್ತಿ ವೇತನವನ್ನು ಪುನರ್ ನಿಗದಿಗೊಳಿಸಿ ಆರ್ಥಿಕ



ಸೌಲಭ್ಯವು ದಿನಾಂಕ : 01-08-2024 ರಿಂದ ದೊರೆಯುವಂತೆ ಆದೇಶಿಸಿದೆ. ಆದರೆ ಈ ಅವಧಿಯಲ್ಲಿ ನಿವೃತ್ತರಾದ/ ನಿಧನರಾದ ಅಧಿಕಾರಿಗಳೂ ಹಾಗೂ ನೌಕರರಿಗೆ 07 ನೇ ವೇತನ ಆಯೋಗದ ವರದಿಯನುಸಾರ ಕೇವಲ ನಿವೃತ್ತಿ ವೇತನ ಸೌಲಭ್ಯವನ್ನು ಮಾತ್ರ ನೀಡಿ, **DCRG, Commutation** ಹಾಗೂ ಗಳಿಕೆ ರಜೆ ನಗದೀಕರಣಕ್ಕೆ ಸಂಬಂಧಿಸಿದ ಆರ್ಥಿಕ ಸೌಲಭ್ಯವನ್ನು 2018 ರಲ್ಲಿ ಜಾರಿಗೆ ತರಲಾದ ಆರನೇ ವೇತನ ಆಯೋಗದ ಅನುಸಾರ ನೀಡಲು ಆದೇಶಿಸಿದೆ. ಇದರಿಂದ ನಮಗೆ ಅನ್ಯಾಯವಾಗಿದೆ. ನಮಗೆ ನ್ಯಾಯವಾಗಿ ದೊರಕಬೇಕಾದ 07 ನೇ ವೇತನ ಆಯೋಗದ ಅನುಸಾರ DCRG, Commutation ಹಾಗೂ ಗಳಿಕೆ ರಜೆ ನಗದೀಕರಣ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ಸರ್ಕಾರದ ಗಮನ ಸೆಳೆಯಲು, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯ ಮಂತ್ರಿಗಳಿಗೆ ಮನವಿ ಸಲ್ಲಿಸಲು ವಿಶ್ವ ಹಿರಿಯ ನಾಗರೀಕರ ದಿನಾಚರಣೆಯ ದಿನವಾದ ಇಂದು ನಡೆಸಲಾಗುತ್ತಿದೆ ಎಂದರು.

ದಿ.1-7-2022 ರಿಂದ 31-7-2024 ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಏಳನೇ ವೇತನ ಆಯೋಗದ ಅನುಸಾರ ನಿವೃತ್ತಿ ಆರ್ಥಿಕ ಸೌಲಭ್ಯದಿಂದ ವಂಚಿತರಾಗಿ, ಅರನೇ ವೇತನ ಆಯೋಗದ ಅನುಸಾರ ನಿವೃತ್ತಿ ಆರ್ಥಿಕ ಸೌಲಭ್ಯ ನೀಡಲಾಗಿದೆ.ನಮಗೆ ನಷ್ಟವಾದ ನಿವೃತ್ತಿ ಆರ್ಥಿಕ ಸೌಲಭ್ಯವನ್ನು ಡಿ.ಸಿ.ಆರ್.ಜಿ., ಕಮ್ಯುಟೇಶನ್, ಗಳಿಕೆ ರಜೆ ನಗದೀಕರಣದ 'ಮೊತ್ತವನ್ನು ಏಳನೇ ವೇತನ ಆಯೋಗದ ಲೆಕ್ಕಾಚಾರದಲ್ಲಿ ನೀಡಬೇಕಿದೆ ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ಅಡಿಯಲ್ಲಿ ರಾಜ್ಯ ಮಟ್ಟದ ಬೃಹತ್ ಸಮಾವೇಶದಲ್ಲಿ ಹನ್ನೆರಡು ಸಾವಿರ ನಿವೃತ್ತ ನೌಕರರು ಸಮಾವೇಶಗೊಂಡು ನಮ್ಮ ಬೇಡಿಕೆ ಕುರಿತು ಹಕ್ಕೊತ್ತಾಯದ ಚಿನ್ನವತ್ತಳೆ ಸಲ್ಲಿಸಲಾಗಿತ್ತು. ದಿ.20-9-2024 ರಂದು ಮೈಸೂರಿನಲ್ಲಿ ತಮಗೆ ನಮ್ಮ ವೇದಿಕೆಯ ನಿಯೋಗದೊಂದಿಗೆ ಮನವಿಯನ್ನು ಸಲ್ಲಿಸಿದ್ದೇವೆ. ಈಗ ನಮಗೆ ಆಗಿರುವ ನಿವೃತ್ತಿ ಆರ್ಥಿಕ ಸೌಲಭ್ಯದ ನಷ್ಟ ಕುರಿತು ತಾವುಗಳು 1-7-2022ರಿಂದ 31-7-2024ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಡಿ.ಸಿ.ಆರ್.ಜಿ., ಕಮ್ಯುಟೇಶನ್, ಗಳಿಕೆ ರಜೆ ನಗದೀಕರಣದ ಮೊತ್ತವನ್ನು ಏಳನೇ ವೇತನ ಆಯೋಗದ ಲೆಕ್ಕಾಚಾರದಲ್ಲಿ ನೀಡಬೇಕೆಂದು ಹಾಗೂ ಪರಿಷ್ಕೃತ ಆದೇಶ ಹೊರಡಿಸಬೇಕೆಂದು ಮನವಿ ಮಾಡಿ ಪರಿಷ್ಕೃತ ಆದೇಶ ಹೊರಡಿಸುವಲ್ಲಿ ಅನುಕೂಲಕಲ್ಪಿಸಬೇಕೆಂದು ಒತ್ತಾಯಿಸಲಾಯಿತು.

ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಭಾಗವಹಿಸಿದ್ದ ನಿವೃತ್ತ ನೌಕರರು ತಮ್ಮ ಕೈಗೆ ಕಪ್ಪು ಪಟ್ಟಿ ಧರಿಸಿ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವಿಶ್ವ ರೇಬಿಸ್ ದಿನಾಚರಣೆ: ಉಚಿತ ರೇಬೀಸ್ ನಿರೋಧಕ ಲಸಿಕೆ

» ಚಿತ್ರದುರ್ಗ

ಪಶುವೈದ್ಯಕೀಯ ಪಾಲಿಕ್ಲಿನಿಕ್ ವತಿಯಿಂದ ವಿಶ್ವ ರೇಬೀಸ್ ದಿನಾಚರಣೆ ಅಂಗವಾಗಿ 2024ರ ಸೆ.28 ರಿಂದ ಅ.28ರ ವರೆಗೆ ಉಚಿತ ರೇಬೀಸ್ ನಿರೋಧಕ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ಸಾಕು ಪ್ರಾಣಿಗಳಾದ ನಾಯಿ, ಬೆಕ್ಕುಗಳಿಗೆ ನಗರದ ಪಶುವೈದ್ಯಕೀಯ ಪಾಲಿಕ್ಲಿನಿಕ್‌ನಲ್ಲಿ ಬೆಳಿಗೆ 9 ರಿಂದ ಮಧ್ಯಾಹ್ನ 1 ರವರೆಗೆ ಹಾಗೂ ಮದ್ಯಾಹ್ನ 2 ರಿಂದ 4 ಗಂಟೆಯವರೆಗೆ ಉಚಿತ ರೇಬೀಸ್ ನಿರೋಧಕ ಲಸಿಕೆ ಹಾಕಿಸಿಕೊಳ್ಳಲು ತಿಳಿಸಿದೆ. ಈ ಸೌಲಭ್ಯವು ಜಿಲ್ಲೆಯ ಎಲ್ಲಾ ಪಶು ಆಸ್ಪತ್ರೆಗಳಲ್ಲಿ ಲಭ್ಯವಿದೆ ಎಂದು ಪಶು ವೈದ್ಯಕೀಯ ಪಾಲಿಕ್ಲಿನಿಕ್ ನಿರ್ದೇಶಕ ಡಾ.ಎಸ್.ಎನ್.ಹರೀಶ್ ತಿಳಿಸಿದ್ದಾರೆ.

### ಅ.3 ರಂದು ಯುವ ಸಂಸತ್ ಸ್ಪರ್ಧೆ

» ದಾವಣಗೆರೆ

ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳ ಯುವ ಸಂಸತ್ ಸ್ಪರ್ಧೆಯನ್ನು ಅಕ್ಟೋಬರ್ 3 ರಂದು ಬೆಳಿಗ್ಗೆ 10 ಗಂಟೆಗೆ ನಗರದ ನಿಟುವಳ್ಳಿಯಲ್ಲಿನ ಆರ್.ಎಂ.ಎಸ್.ಎ. ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೊಟ್ರೇಶ್ ತಿಳಿಸಿದ್ದಾರೆ.

### ಗಾಂಧಿ ಜಯಂತಿ: ಸ್ವಚ್ಛತಾ ಶ್ರಮದಾನ

» ದಾವಣಗೆರೆ

ರಾಷ್ಟ್ರಪಿತ ಮಹಾತ್ಮ ಗಾಂಧಿ ಜಯಂತಿ ಅಂಗವಾಗಿ ಅಕ್ಟೋಬರ್ 2 ರಂದು ಬೆಳಿಗ್ಗೆ 7-30 ರಿಂದ ಜಿಲ್ಲಾ ನ್ಯಾಯಾಲಯಗಳ ಆವರಣದಲ್ಲಿ ಸ್ವಚ್ಛತಾ ಶ್ರಮದಾನ, ಸ್ವಚ್ಛತಾ ಮಾನವ ಸರಪಳಿ, ಮಹಾತ್ಮ ಗಾಂಧಿಯವರ ಭಾವಚಿತ್ರಕ್ಕೆ ನಮನ ಮತ್ತು ಮಹಾತ್ಮ ಗಾಂಧಿಯವರ ಬಗ್ಗೆ ಚಿಂತನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.ಕಾರ್ಯಕ್ರಮದಲ್ಲಿದಾವಣಗೆರೆ ನಗರ ಘಟಕದ ಎಲ್ಲಾ ನ್ಯಾಯಾಧೀಶರು, ನ್ಯಾಯಾಲಯಗಳ ಸಿಬ್ಬಂದಿ ಮತ್ತು ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸುವರು.

### ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ, 5 ರಂದು ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅಕ್ಟೋಬರ್ 17 ರಂದು ಗುರುವಾರ ಜಿಲ್ಲಾ ಕೇಂದ್ರದಲ್ಲಿ ಆಚರಿಸಲು ಸಿದ್ದತೆಗಾಗಿ ಅಕ್ಟೋಬರ್ 5 ರ ಬೆಳಿಗ್ಗೆ 11 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಾಗೂ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಸಮಾಜದ ಮುಖಂಡರು, ಅಧಿಕಾರಿ ವರ್ಗದವರು ಭಾಗವಹಿಸಿ ಸಲಹೆ, ಸೂಚನೆಗಳನ್ನು ನೀಡುವಂತೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

### ಗಾಂಧಿ ಜಯಂತಿ ಅ.2ಕ್ಕೆ ಮಾಂಸ ಮಾರಾಟ, ಪ್ರಾಣಿ ವಧೆ ನಿಷೇಧ

» ದಾವಣಗೆರೆ

ಅಕ್ಟೋಬರ್ 2 ರಂದು ರಾಷ್ಟ್ರಪತಿ ಮಹಾತ್ಮಗಾಂಧಿ ಜಯಂತಿ ಇರುವ ಕಾರಣ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪ್ರಾಣಿ ವಧೆ, ಪ್ರಾಣಿ ಮಾಂಸ, ಹಾಗೂ ಮೀನಿನ ಮಾಂಸ ಮಾರಾಟವನ್ನು ನಿಷೇಧಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಪಾಲಿಕೆ ವ್ಯಾಪ್ತಿಯಲ್ಲಿ ಮಾಂಸದಉದ್ದಿಮೆನಡೆಸುತ್ತಿರುವಉದ್ದಿಮೆದಾರರು ಅ.2ರಂದು ಪ್ರಾಣಿ ವಧೆ, ಪ್ರಾಣಿ ಮಾಂಸ, ಹಾಗೂ ಮೀನಿನ ಮಾಂಸ ಮಾರಾಟ ಮಾಡಿದಲ್ಲಿ ಮಹಾನಗರ ಪಾಲಿಕೆ ಕಾಯಿದೆ ಅಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು.

### ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಗೆ ಅರ್ಜಿ ಸಲ್ಲಿಸಲು ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಕಾನೂನು ಪದವೀಧರರಿಗೆ ಕಾನೂನು ತರಬೇತಿ ಪಡೆಯಲು ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ. ಇಲಾಖೆಯ ವೆಬ್‌ಸೈಟ್: www.tw.kar.nic.in ನಲ್ಲಿ ಅಕ್ಟೋಬರ್ 7 ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಮೂಲ ಪ್ರತಿಯೊಂದಿಗೆ ಸಂಬಂಧಿಸಿದ ದಾಖಲೆಗಳನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಸಂಖ್ಯೆ:45, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಸಲ್ಲಿಸಲು ತಿಳಿಸಲಾಗಿದೆ. ಷರತ್ತುಗಳು: ಕಾನೂನು ಪದವಿ ಪಡೆದು 2 ವರ್ಷ ಮೀರಿರಬಾರದು, ತರಬೇತಿಯನ್ನು ದಾವಣಗೆರೆಯಲ್ಲೇ ಪಡೆಯಬೇಕು. ಅರ್ಜಿ ಸಲ್ಲಿಕೆ ಕೊನೆ ದಿನಾಂಕಕ್ಕೆ 40 ವರ್ಷ ಮೀರಿರಬಾರದು.

---

## ವರ್ಷದಲ್ಲಿ ಬದಲಾದ ಚಿತ್ರಣ ರೋಗಿಗಳಿಗೆ ಉತ್ತಮ ಚಿಕಿತ್ಸೆಯ ಭರವಸೆ

# ಜಿಲ್ಲಾ ಆಸ್ಪತ್ರೆ ಕಾರ್ಯಕ್ಷಮತೆ ಹೆಚ್ಚಳ

» ಚಿತ್ರದುರ್ಗ

ಚಿತ್ರದುರ್ಗ ನಗರದ ಹೃದಯ ಭಾಗದಲ್ಲಿರುವ ಜಿಲ್ಲಾ ಆಸ್ಪತ್ರೆ ಬಡ ರೋಗಿಗಳ ಆಶಾಕಿರಣವಾಗಿ ಬದಲಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ, ರೋಗಿಗಳಿಗೆ ಉತ್ತಮವಾಗಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎಸ್.ಪಿ. ರವೀಂದ್ರ ಹೇಳಿದ್ದಾರೆ.

ಈ ಕುರಿತು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮಂಗಳವಾರ ಜಿಲ್ಲಾ ಆಸ್ಪತ್ರೆಯ ಕಾರ್ಯವೈಖರಿಯಲ್ಲಿ ಉಂಟಾದ ಬದಲಾವಣೆ ಹಾಗೂ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾಧ್ಯಮ ಮಿತ್ರರಿಗೆ ಅಂಕಿ ಸಂಖ್ಯೆಗಳ ಸಮೇತ ಮಾಹಿತಿ ನೀಡಿದ್ದಾರೆ.

**26,090 ಒಳರೋಗಿಗಳಿಗೆ ಉಚಿತ ಚಿಕಿತ್ಸೆ:** ಕಳೆದ ಅಕ್ಟೋಬರ್ ನಿಂದ ಇಲ್ಲಿಯವರೆಗೆ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಎ.ಬಿ.ಆರ್.ಕೆ (ಆಯಷ್ಮಾನ್ ಭಾರತ ಆರೋಗ್ಯ ಕರ್ನಾಟಕ) ಅಡಿ 26,090 ಒಳರೋಗಿಗಳು ದಾಖಲಾಗಿ ಉಚಿತ ಚಿಕಿತ್ಸೆ ಪಡೆದಿದ್ದಾರೆ. ಜಿಲ್ಲಾ ಆಸ್ಪತ್ರೆಯಿಂದ ಸುವರ್ಣ ಕರ್ನಾಟಕ ಆರೋಗ್ಯ ಟ್ರಸ್ಟ್‌ಗೆ ಎ.ಬಿ.ಆರ್.ಕೆ ಅಡಿ ಚಿಕಿತ್ಸೆ ನೀಡಿದ 24,620 ಕ್ಲೇಮ್‌ಗಳನ್ನು ಸಲ್ಲಿಕೆ ಮಾಡಲಾಗಿದೆ. ಬಿಡುಗಡೆಯಾದ ಕ್ಲೇಮ್ ಮೊತ್ತದಲ್ಲಿ ಶೇ.20 ರಷ್ಟು ಮೊತ್ತವನ್ನು ವೈದ್ಯರು ಹಾಗೂ ಸಿಬ್ಬಂದಿಗಳಿಗೆ ಇನ್ಸೆಟಿವ್ ರೂಪದಲ್ಲಿ ನೀಡಿ, ಮತ್ತಷ್ಟು ಉತ್ತಮ ಕಾರ್ಯಕ್ಕೆ ಪ್ರೇರಣೆ ನೀಡಲಾಗುತ್ತಿದೆ. ಈ ವರ್ಷದಲ್ಲಿ ರೂ.1.10 ಕೋಟಿ ಇನ್ಸೆಟಿವ್ ನೀಡಲಾಗಿದೆ.

**ಏರಿಕೆಯಾದ ಶಸ್ತ್ರಚಿಕಿತ್ಸೆ ಪ್ರಮಾಣ :** ಶಸ್ತ್ರಚಿಕಿತ್ಸಕರು ಹಾಗೂ ವೈದ್ಯರು ಬೇರೆಡೆಗೆ ರೋಗಿಗಳನ್ನು ಶಿಫಾರಸ್ಸು ಮಾಡುವುದನ್ನು ತಡೆಗಟ್ಟಲಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಹೆಚ್ಚಿನ ಶಸ್ತ್ರಚಿಕಿತ್ಸೆಗಳನ್ನು ಕೈಗೊಳ್ಳಲಾಗುತ್ತಿದೆ. ಒಂದು ವರ್ಷ ಅವಧಿಯಲ್ಲಿ 2520 ಜನರಲ್ ಸರ್ಜರಿ, 1510 ಮೂಳೆ ಶಸ್ತ್ರಚಿಕಿತ್ಸೆ, 1100 ಕಣ್ಣು ಪೊರೆ, 100 ಇತರೆ ಕಣ್ಣಿನ ಶಸ್ತ್ರ ಚಿಕಿತ್ಸೆ, 450 ಲ್ಯಾಪ್ರೋಸ್ಕೋಪಿಕ್ ಸರ್ಜರಿ, 15 ಪುರುಷ ಸಂತಾನಹರಣ ಸೇರಿದಂತೆ, ಜಿಲ್ಲಾ ಆಸ್ಪತ್ರೆ ಮಕ್ಕಳ ವಿಭಾಗದಲ್ಲಿ 4651 ಸಿಜೆರಿಯನ್, ಗರ್ಭಕೋಶ ಇತರೆ ತೊಂದರೆ ಇರುವ 300 ವಿವಿಧ ಶಸ್ತ್ರಚಿಕಿತ್ಸೆ, 2100 ಸಹಜ ಹೆರಿಗೆಗಳನ್ನು ಜಿಲ್ಲಾ ಆಸ್ಪತ್ರೆಯಲ್ಲಿ ಮಾಡಲಾಗಿದೆ. ಇದರೊಂದಿಗೆ 722 ಹಾವು ಕಡಿತ, 3626 ರಸ್ತೆ ಅಪಘಾತ, 3246 ಹೊಡದಾಟ, 2194 ವಿಷಪ್ರಾಶನದಂತಹ ಪ್ರಕರಣಗಳಲ್ಲಿ ಚಿಕಿತ್ಸೆ ನೀಡಲಾಗಿದೆ.

**ನೂತನ ಕಟ್ಟಡದಲ್ಲಿ ತಾಯಿ ಮಕ್ಕಳ ಆಸ್ಪತ್ರೆ:** ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಕೋವಿಡ್ ಪೂರ್ವದಲ್ಲಿ ನಿರ್ಮಾಣವಾದ ನೂತನ ಕಟ್ಟಡದಲ್ಲಿ ತಾಯಿ ಮಕ್ಕಳ ಆಸ್ಪತ್ರೆ ಕಾರ್ಯಾರಂಭ ಮಾಡಿದೆ. ನೂತನ ಕಟ್ಟಡದಲ್ಲಿ ಹೆರಿಗೆ ಕೇಂದ್ರ, ಆಪರೇಷನ್ ಥೇಯಟರ್, ವಾರ್ಡ್ ಹಾಗೂ ಔಷಧ ವಿತರಣೆ ಘಟಕಗಳನ್ನು ಪ್ರತ್ಯೇಕವಾಗಿ ತೆರದು ಚಿಕಿತ್ಸೆ ನೀಡಲಾಗುತ್ತಿದೆ. 4651 ಸಿಜೆರಿಯನ್, 2100 ಸಹಜ ಹೆರಿಗೆ ಸೇರಿದಂತೆ 6751 ಸುರಕ್ಷಿತ ಹೆರಿಗೆಗಳನ್ನು ತಾಯಿ ಮತ್ತು ಮಕ್ಕಳ ವಿಭಾಗದಿಂದ ಮಾಡಲಾಗಿದೆ. ಸದ್ಯ ತಾಯಿ ಮಕ್ಕಳ ವಿಭಾಗ 100 ಹಾಸಿಗೆಗಳ ಸಾಮರ್ಥ್ಯ ಹೊಂದಿದೆ. 160 ಜನರಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಹೆಚ್ಚಿನ ಬೇಡಿಕೆ ಇರುವುದರಿಂದ 50 ಹಾಸಿಗೆಗಳ ಸಾಮರ್ಥ್ಯ ಹೆಚ್ಚಿಸಲು ಸಿದ್ದತೆ ನಡೆಸಲಾಗಿದೆ. ಅಪೌಷ್ಠಿಕ ಮಕ್ಕಳು ಹಾಗೂ ತಾಯಿಯ ಆರೈಕೆಗೆ 10 ಬೆಡ್‌ಗಳ ಎನ್‌ಆರ್‌ಸಿ ಕೇಂದ್ರವನ್ನು ಸಹ ಇಲ್ಲಿ ತೆರೆಯಲಾಗಿದೆ. ನವಜಾತ ಮ್ಕಕಳಲ್ಲಿ ಕಂಡುಬರುವ ಅಂಗವಿಕಲತೆ ಹಾಗೂ ಇತರೆ ಸಮಸ್ಯೆಗಳನ್ನು ಆರಂಭದಲ್ಲಿಯೇ ಗುರುತಿಸಿ ವಿಶೇಷ ಚಿಕಿತ್ಸೆ ನೀಡಲು ಡಿ.ಇ.ಐ.ಸಿ (ಡಿಸ್ಟ್ರಿಕ್ಟ್ ಅರ್ಲೀ ಇನ್ಟರ್‌ವೆನಷನ್ ಸೆಂಟರ್) ವಿಶೇಷ ಕೇಂದ್ರ ತೆರೆಯಲಾಗುವುದು ಒಂದು ವರ್ಷದಲ್ಲಿ ಶ್ವಾಶಕೋಶ, ಉಸಿರಾಟ ಸೇರಿದಂತೆ ಇತರೆ ತೊಂದರೆ ಅನುಭವಿಸುವ 2370 ನವ ಜಾತ ಶಿಶುಗಳಿಗೆ ಚಿಕತ್ಸೆ ನೀಡಲಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿಯೇ 1913 ಮಕ್ಕಳ ಸಂಪೂರ್ಣ ಚಿಕಿತ್ಸೆ ಮಾಡಿ ಬಿಡುಗಡೆ ಮಾಡಲಾಗಿದೆ. 275 ಮಕ್ಕಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೇರೆಡೆಗೆ ಶಿಫಾರಸ್ಸು ಮಾಡಲಾಗಿದೆ. 1000.ಗ್ರಾಂಗಿಂತಲೂ ಕಡಿಮೆ ತೂಕದ 25 ಮಕ್ಕಳಿಗೆ ತಿಂಗಳಾನುಗಟ್ಟಲೇ ವಿಶೇಷ ಹಾರಕೈ ನೀಡಲಾಗಿದೆ. 1000 ರಿಂದ 1500 73 ಮಕ್ಕಳ ಚಿಕಿತ್ಸೆ ನೀಡಲಾಗದೆ. ನವಜಾತ ಶಿಶು ಪ್ರಮಾಣವನ್ನು ತಗ್ಗಸಿಲಾಗಿದೆ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

**5454 ಯನಿಟ್ ರಕ್ತ ಸಂಗ್ರಹ:** ನವೀಕರಣ ಪರವಾನಿಗೆ ಕಾರಣದಿಂದ ಜಿಲ್ಲಾ ಆಸ್ಪತ್ರೆಯ ರಕ್ತ ನಿಧಿ ಕೇಂದ್ರದ ಕಾಯಾಚರಣೆ ಸ್ಥಗಿತಗೊಳ್ಳುವ ಸಂಭವ ಉಂಟಾಗಿತ್ತು. ಇದನ್ನು ಸರಿಪಡಿಸಿ ನವೀಕರಣ ಪರವಾನಿಗೆ ಪಡೆಯಲಾಗಿದೆ. ರಕ್ತ ನಿಧಿ ಕೇಂದ್ರಕ್ಕೆ ವಾರ್ಷಿಕವಾಗಿ 5760 ಯನಿಟ್ ರಕ್ತ ಸಂಗ್ರಹದ ಗುರಿ ನೀಡಲಾಗಿತ್ತು. 50 ರಕ್ತದಾನ ಶಿಬಿರ ಹಾಗೂ ಸ್ವಯಂ ಪ್ರೇರಿತ ರಕ್ತದಾನಿಗಳ ನೆರವಿನಿಂದ ಇದರುವರೆಗೂ 5454 ಯನಿಟ್ ರಕ್ತ ಸಂಗ್ರಹ ಮಾಡಲಾಗಿದೆ. ಹೀಗೆ ಸಂಗ್ರಹಿಸಿದ ರಕ್ತವನ್ನು ಅಗತ್ಯವಿರುವ ರೋಗಿಗಳಿಗೆ ಬಳಸಲಾಗಿದೆ.

ಜಿಲ್ಲಾ ಆಸ್ಪತ್ರೆಯ ಹಳೆಯ ತಾಯಿ ಮತ್ತು ಮಗು ಆರೈಕೆ ಕೇಂದ್ರದಲ್ಲಿ 50 ರಿಂದ 60 ಲಕ್ಷ ವೆಚ್ಚದಲ್ಲಿ ನೂತನ ರಕ್ತ ನಿಧಿ ಕೇಂದ್ರ ನಿರ್ಮಾಣ ಮಾಡಲಾಗಿದೆ. ಸ್ಥಳಾಂತರಕ್ಕೆ ಅನುಮತಿ ದೊರೆತ ತಕ್ಷಣವೇ ನೂತನ ರಕ್ತ ನಿಧಿ ಕೇಂದ್ರ ಕಾರ್ಯಾರಂಭ ಮಾಡಲಿದೆ. ಹಳೆಯ ರಕ್ತ ನಿಧಿ ಕೇಂದ್ರದ ಜಾಗವನ್ನು ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ನೀಡಲಾಗುವುದು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಮಾಹಿತಿ ನೀಡಿದರು.

**ತಿಂಗಳಿಗೆ 98 ರೋಗಿಗಳಿಗೆ ಡಯಾಲಿಸಿಸ್ :** ಈ ಮೊದಲು ಜಿಲ್ಲಾ ಆಸ್ಪತ್ರೆಯಲ್ಲಿ ಕಿಡ್ನಿ ವೈಫಲ್ಯಗೊಂಡ 50 ರಿಂದ 60 ರೋಗಿಗಳಿಗೆ ಡಯಾಲಿಸ್ ಮಾಡಲಾಗುತ್ತಿತ್ತು. ಈ ಪ್ರಮಾಣ ತಿಂಗಳಿಗೆ 98 ಏರಿಕೆಯಾಗಿದೆ. ಡಯಾಲಿಸಿಸ್ ಕೇಂದ್ರದ ಕಾರ್ಯಕ್ಷಮತೆಯಲ್ಲಿ ದ್ವಿಗುಣಗೊಳಿಸಲಾಗಿದೆ. ಸದ್ಯ 15 ಡಯಾಲಿಸ್ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ಹಿಂದೆ ತಿಂಗಳಿಗೆ 345 ಸೈಕಲ್‌ಗಳಷ್ಟು ಮಾತ್ರ ಡಯಾಲಿಸ್ ನಡೆಸಲಾಗುತ್ತು. ಈ ಪ್ರಮಾಣ 900 ಸೈಕಲ್‌ಗಳಿಗೆ ಏರಿಕೆಯಾಗಿದೆ. ಡಯಾಲಿಸಿಸ್‌ಗೆ ಏಕ ಬಳಕೆಯ ಡಯಾಲಿಸರ್‌ಗಳನ್ನು ಬಳಸು ತ್ತಿದ್ದು, ರೋಗಿಗಳ ಆರೋಗ್ಯದ ಕಾಳಜಿ ವಹಿಸಲಾಗುತ್ತಿದೆ.ಸದ್ಯರೋಗಿಗಳುಡಯಾಲಿಸಿಸ್ ಕಾಯುವ ಪರಿಸ್ಥಿತಿಯಿಲ್ಲ. ಡಯಾಲಿಸಿಸ್ ಸಂಪೂರ್ಣ ಉಚಿತವಾಗಿದೆ.

**ಬಲಗೊಂಡ ಎಕ್ಸರೇ ಹಾಗೂ ಸ್ಕ್ಯಾನಿಂಗ್ ವಿಭಾಗ :** ಜಿಲ್ಲಾ ಆಸ್ಪತ್ರೆಯ ಎಕ್ಸ್ ರೇ ವಿಭಾಗದಿಂದ ಒಂದು ವರ್ಷ ಅವಧಿಯಲ್ಲಿ 31,996 ಎಕ್ಸ್ ರೇಗಳನ್ನು ತೆಗೆಯಲಾಗಿದೆ. ಪ್ರತಿದಿನ ನೂರಾರು ರೋಗಿಗಳಿಗೆ ಉಚಿತವಾಗಿ ಎಕ್ಸ್ ರೇ ಸೌಲಭ್ಯ ಒದಗಿಸಲಾಗುತ್ತದೆ. ಆಸ್ಪತ್ರೆಯ ಎಂಆರ್‌ಐ ಸ್ಕ್ಯಾನಿಂಗ್ ವಿಭಾಗದಲ್ಲಿ ಅನಾವಶ್ಯಕವಾಗಿ ಸ್ಕ್ಯಾನಿಂಗ್ ನಡೆಸಲಾಗುತ್ತಿತ್ತು. ಇದರಿಂದ ಅಗತ್ಯ ರೋಗಿಗಳಿಗೆ ತುಂಬಾ ಅನಾನುಕೂಲವಾಗುತ್ತಿತ್ತು. ಇದನ್ನು ತಡೆಗಟ್ಟಲಾಗಿದೆ. ಇದರಿಂದ ರೋಗಿಗಳಿಗೆ ಒಂದು ದಿನಗ ಒಳಗೆಯೇ ಸ್ಕ್ಯಾನಿಂಗ್ ಲಭ್ಯವಾಗಿದೆ. ತಲೆಗಾಯ, ಪಾರ್ಶ್ವವಾಯು, ಕ್ಯಾನ್ಸರ್ ಸೇರಿಂದತೆ ಗಂಭೀರ ಕಾಯಿಲೆಯಿಂದ ಬಳಲುತ್ತಿರುವ ರೋಗಿಗಳಿಗೆ ತುರ್ತಾಗಿ ಎಂಆರ್‌ಐ ಸ್ಕ್ಯಾನಿಂಗ್ ನಡೆಸಲಾಗುತ್ತಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ದಿನ 60 ರಿಂದ 70 ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್ ಅವಶ್ಯಕತೆ ಇದೆ. ಜಿಲ್ಲಾ ಆಸ್ಪತ್ರೆಯಲ್ಲಿ ತಿಂಗಳಲ್ಲಿ 900 ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್ ನಡೆಸಲಾಗುತ್ತಿದೆ. ಒಬ್ಬ ರೆಡಿಯೋಲಾಜಿಸ್ಟ್‌ಗಳ ಕೊರತೆ ಇರುವ ಕಾರಣದಿಂದ ಬಸವೇಶ್ವರ ಹಾಗೂ ಸತ್ಯ ಕ್ಲಿನಿಕ್‌ಗಳಲ್ಲಿ ಒಪ್ಪಂದ ಮಾಡಿಕೊಂಡು ಸರ್ಕಾರಿ ದರಗಳಲ್ಲಿ ಸ್ಕ್ಯಾನಿಂಗ್ ನಡೆಸಲಾಗುತ್ತಿದೆ. ಪ್ರತಿದಿನ 25ಕ್ಕೂ ಹೆಚ್ಚಿನ ಸಿಟಿ ಸ್ಕ್ಯಾನಿಂಗ್ ನಡೆಸಲಾಗುತ್ತಿದೆ. ಈ ಮೊದಲು ಜಿಲ್ಲಾ ಆಸ್ಪತ್ರೆಯಲ್ಲಿ ತಿಂಗಳಿಗೆ 15 ರಿಂದ 20 ಸಾವಿರ ರಕ್ತ ಪರೀಕ್ಷೆ ನಡೆಸಲಾಗುತ್ತು. ಈ ಪ್ರಮಾಣ 65 ರಿಂದ 70 ಸಾವಿರಕ್ಕೆ ಏರಿಕೆಯಾಗಿದೆ. ರಕ್ತ ಪರೀಕ್ಷೆ ಕೇಂದ್ರವು 24*7 ಕೆಲಸ ನಿರ್ವಹಿಸುತ್ತಿದೆ.

**ನೀಗಿದ ಸಿಬ್ಬಂದಿ ಕೊರತೆ:** ಜಿಲ್ಲಾ ಆಸ್ಪತ್ರೆಯಲ್ಲಿ ಎಲ್ಲಾ ವಿಭಾಗಗಳಲ್ಲಿ ತಜ್ಞವೈದ್ಯರನ್ನು ನೇಮಕ ಮಾಡಲಾಗಿದೆ. ಯಾವುದೇ ವೈದ್ಯರ ಕೊರತೆಯಿಲ್ಲ. 38 ಹೆಚ್ಚುವರಿ ಶುಶ್ರುಷಕರನ್ನು ಒಂದು ವರ್ಷದ ಅವಧಿಯಲ್ಲಿ ನೇಮಕ ಮಾಡಲಾಗಿದೆ. ಇದರಿಂದ 98 ಇದ್ದ ಶುಶ್ರುಷಕರ ಸಂಖ್ಯೆ 136ಕ್ಕೆ ಹೆಚ್ಚಳವಾಗಿದೆ. 240 ಪ್ಯಾರಮೆಡಿಕಲ್, 30 ಕಿರಿಯ ಆರೋಗ್ಯ ಸಹಾಯಕರು, 60 ಜೆಎನ್‌ಎಂ, 240 ಬಿಎಸ್ಸಿ ನರ್ಸಿಂಗ್, 30 ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಜಿಲ್ಲಾ ಆಸ್ಪತ್ರೆ ವೈದ್ಯರೊಂದಿಗೆ ಸಾರ್ವಜನಿಕ ಸೇವೆಟೊಂಕ ಕಟ್ಟಿ ನಿಂತಿದ್ದಾರೆ.

**ಸ್ವಚ್ಛತೆಗೆ 75 ಮಾರ್ಕ್ಸ್ :** ಜಿಲ್ಲಾ ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ದಿನಕ್ಕೆ ಮೂರು ಬಾರಿ ಸ್ವಚ್ಚತಾಕಾರ್ಯ ನಡೆಸಲಾಗುತ್ತಿದೆ. ಕೊಪ್ಪಳ ಆಸ್ಪತ್ರೆಯಿಂದ ಬಂದ ತಂಡ ಜಿಲ್ಲಾ ಆಸ್ಪತ್ರೆಯ ಸ್ವಚ್ಛತೆ 75 ಮಾರ್ಕ್ಸ್ ನೀಡಿದೆ. ಇದರಿಂದ ರಾಜ್ಯದಲ್ಲಿ ಸ್ವಚ್ಛತೆ ಕಾಯ್ದುಕೊಂಡ ಕೆಲವೇ ಆಸ್ಪತ್ರೆಗಳ ಸಾಲಿಗೆ ಜಿಲ್ಲಾ ಆಸ್ಪತ್ರೆ ಸೇರ್ಪಡೆಯಾಗಿದ್ದು, ರಾಜ್ಯ ಮಟ್ಟದಲ್ಲಿ ಸ್ವಚ್ಚತೆಗೆ ಹೆಸರುವಾಸಿಯಾಗುವ ಬಲವಾದ ನಿರೀಕ್ಷೆ ಮೂಡಿಸಿದೆ. ಇದರೊಂದಿಗೆ ಜಿಲ್ಲಾ ಆಸ್ಪತ್ರೆ ವೈದ್ಯರು ಹೊರ ಔಷಧ ಅಂಗಡಿಗಳಿಗೆ ಚೀಟಿ ಬರದು ಕೊಡುವುಕ್ಕೆ ವಿರಾಮ ನೀಡಿದ್ದಾರೆ. ಈ ಕುರಿತು ಪರಿಶೀಲನೆ ಆಗಮಿಸಿದ ಆರೋಗ್ಯ ಇಲಾಖೆ ಹಿರಿಯ ಅಧಿಕಾರಿಗಳು ಸಹ ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ. ಜಿಲ್ಲಾ ಆಸ್ಪತ್ರೆಯಲ್ಲಿ ಹಲವಾರು ಸುಧಾರಣೆ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಸಂಪೂರ್ಣ ಉಚಿತವಾಗಿ ಉತ್ತಮ ಸೇವೆ ನೀಡಲಾಗುತ್ತಿದೆ. ರೋಗಿಗಳು ಆಸ್ಪತ್ರೆಗೆ ಆಗಮಿಸುವಾಗ ತಪ್ಪದೇ ಆಧಾರ್ ಹಾಗೂ ಪಡಿತರ ಚೀಟಿಯನ್ನು ತರಬೇಕು. ಆಸ್ಪತ್ರೆ ಸಿಬ್ಬಂದಿಗೆ ಯಾವುದೇ ಕಾರಣಕ್ಕೂ ಹಣವನ್ನು ನೀಡಬಾರದು. ಯಾವುದೇ ತೊಂದರೆಯಾದಲ್ಲಿ ದೂರವಾಣಿ ಅಥವಾ ನೇರವಾಗಿ ತಮ್ಮನ್ನು ಭೇಟಿಯಾಗುವಂತೆ ಶಸ್ತ್ರಚಿಕಿತ್ಸಕ ಡಾ. ರವೀಂದ್ರ ತಿಳಿಸಿದ್ದಾರೆ.




### 5 ಕೋಟಿ ವೆಚ್ಚದಲ್ಲಿ ಜಿಲ್ಲಾ ಆಸ್ಪತ್ರೆ ನವೀಕರಣ

ರೂ.5 ಕೋಟಿ ವೆಚ್ಚದಲ್ಲಿ ಆಸ್ಪತ್ರೆಗಳ ನವೀಕರಣ ಕಾರ್ಯಕೈಗೊಳ್ಳಲಾಗುತ್ತದೆ. 5 ರಿಂದ 6 ತಿಂಗಳಲ್ಲಿ ನವೀಕರಣ ಪೂರ್ಣಗೊಳಲ್ಲಿದೆ. ಹೆಚ್ಚುವರಿಯಾಗಿ 32 ಬೆಡ್ ಸ್ಪೆಷಲ್ ವಾರ್ಡಗಳು ಸಿದ್ದಪಡಿಸಲಾಗಿದೆ. 10 ರಿಂದ 12 ಲಕ್ಷ ವೆಚ್ಚದಲ್ಲಿ ಫಿಜಿಯೋತೆರಪಿ ಉಪಕರಣಳನ್ನು ಖರೀದಿಸಿ, ಉಚಿತವಾಗಿ ಫಿಜಿಯೋತೆರಪಿ ಚಿಕಿತ್ಸೆ ನೀಡಲಾಗುತ್ತಿದೆ. ನಿಮ್ಹಾನ್ಸ್ ಸಹಯೋಗದಲ್ಲಿ ಕರ್ನಾಟಕ ಬ್ರೈನ್ ಹೆಲ್ತ್ ಇನ್ಸಿಯೇಟ್ (ಕಬಿ) ಕಾರ್ಯಕ್ರಮ ಜಿಲ್ಲಾ ಆಸ್ಪತ್ರೆಯಲ್ಲಿ ಶುರು ಮಾಡಲಾಗಿದೆ. 1040 ನರ ರೋಗಿಗಳಿಗೆ ಚಿಕಿತ್ಸೆ ನೀಡಲಾಗಿದೆ. ಪ್ರತಿ ಶುಕ್ರವಾರ ನಿಮ್ಹಾನ್ಸ್ ನರರೋಗ ತಜ್ಞ ಡಾ.ಕಿರಣ್‌ಗೌಡ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯ ವರೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಲಭ್ಯವಿದ್ದು ರೋಗಿಗಳಿಗೆ ಚಿಕಿತ್ಸೆ ನೀಡುವರು. ದಾವರಣಗೆರೆ ವಿಶ್ವರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ಸಹಯೋಗದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ಸೋಮವಾರ ಹಾಗೂ ಶುಕ್ರವಾರ ತಪಾಸಣೆ ಚಿಕಿತ್ಸೆ ನೀಡಲಾಗುತ್ತಿದೆ. 10 ಬೆಡ್‌ಗಳ ಕಿಮೋ ಥೆರಪಿ ಚಿಕಿತ್ಸೆ ಕೇಂದ್ರ ಸ್ಥಾಪನೆಯಾಗಿದೆ. ಇಂಡಿಯಾ ಹಾರ್ಟ್ ಸೆಂಟರ್ ಸಹಯೋಗದಲ್ಲಿ ಪ್ರತಿ ಗುರುವಾರ 30 ರಿಂದ 40 ಹೃದಯ ರೋಗಿಗಳ ತಪಾಸಣೆ ನಡೆಸುತ್ತಿದ್ದಾರೆ. ಈ ಎಲ್ಲಾ ನೂತನ ಕಾರ್ಯಕ್ರಮಗಳು ಸಾರ್ವಜನಿಕರಿಗೆ ಉಪಯೋಗಕ್ಕೆ ಲಭ್ಯವಾಗಿವೆ.



---

# ಅ.5ರಂದು ತಾಲ್ಲೂಕು ಮಟ್ಟದ ಕಾರ್ಯಾಗಾರ



» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಲ್ಲಿ ಐ.ಇ.ಸಿ ಚಟುವಟಿಕೆಯಡಿಯಲ್ಲಿ ಹೊದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿಗೆ ಸಂಬಂಧಿಸಿದಂತೆ ಕಾರ್ಮಿಕ ಇಲಾಖೆಯಿಂದ ಕಾರ್ಮಿಕ ಕಾಯ್ದೆಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಾಲ್ಲೂಕು ಮಟ್ಟದ ಕಾರ್ಯಗಾರವನ್ನು ಇದೇ.ಅ.5 ರಂದು ಬೆಳಿಗ್ಗೆ 10 ಗಂಟೆಗೆ ಹೊಸದುರ್ಗ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅಂಗಡಿ ಮತ್ತು ವಾಣಿಜ್ಯ ಸಂಸ್ಥೆ ಕಾಯ್ದೆ, ಕನಿಷ್ಠ ವೇತನ, ವೇತನ ಪಾವತಿ, ಸಮಾನ ವೇತನ, ಗುತ್ತಿಗೆ ಕಾರ್ಮಿಕ ಕಾಯ್ದೆ, ಬಾಲ ಕಾರ್ಮಿಕ, ವಲಸೆ ಕಾರ್ಮಿಕ, ಬೀಡಿ ಮತ್ತು ಸಿಗಾರ್, ಕೈಗಾರಿಕ ವಿವಾದ ಕಾಯ್ದೆ, ಸ್ಥಾಯಿ ಆದೇಶಗಳು ಉಪಧನ ಪಾವತಿ, ಬೋನಸ್ ಪಾವತಿ ಕಾಯ್ದೆ, ಮೆಟರನಿಟಿ ಬೆನಿಫಿಟ್ ಆಕ್ಟ್, ಸೆಲ್ಸ್ ಪ್ರಮೋಷನ್, ಕಟ್ಟಡ ಮತ್ತು ಇತರೆ ನಿರ್ಮಾಣ ಮಂಡಳಿಯ ಯೋಜನೆ ಮತ್ತು ಅಸಂಘಟಿತ ಕಾರ್ಮಿಕ ವಲಯದ ಯೋಜನೆಗಳ ಅನುಷ್ಠಾನದ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ಮಾಹಿತಿ ನೀಡುವರು. ಹೊಳಲ್ಕೆರೆ ಮತ್ತು ಹೊಸದುರ್ಗ ತಾಲ್ಲೂಕಿನ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆ, ಕಾರ್ಖಾನೆಯ ಗುತ್ತಿಗೆದಾರರು, ಎಲ್ಲಾ ವರ್ಗದ ಉದ್ಯೋಗ ಮಾಲೀಕರು, ಕಾರ್ಮಿಕರು, ಕಟ್ಟಡ ಮತ್ತು ಇತರೆ ನಿರ್ಮಾಣದ ಕಾರ್ಮಿಕರ ಕಾರ್ಮಿಕ ಸಂಘಟನೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಟ್ಯಾಕ್ಸಿ, ಮ್ಯಾಕ್ಸಿ, ಕ್ಯಾಬ್, ಆಟೋ ರಿಕ್ಷಾ, ವಾಹನ ಚಾಲಕರು, ಗ್ಯಾರೇಜ್ ಮಾಲೀಕರು, ಮೆಕ್ಯಾನಿಕ್ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಎಲ್ಲಾ ಪದಾಧಿಕಾರಿಗಳು ಕಾರ್ಯಗಾರಕ್ಕೆ ಸದುಪಯೋಗ ಪಡೆದುಕೊಳ್ಳುವಂತೆ ಚಿತ್ರದುರ್ಗ ಉಪವಿಭಾಗದ ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂ ಸಾಬ್ ಕೋರಿದ್ದಾರೆ.

---

## ಪ್ರಮುಖ ಸುದ್ದಿ

### ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಎನ್‌ಜಿಓಗಳ ಸಹಕಾರದೊಂದಿಗೆ ಸ್ಕ್ಯಾವೆಂಜರ್ ಸಮೀಕ್ಷೆ ನಡೆಸಿ

» ಚಿತ್ರದುರ್ಗ

ಎನ್.ಜಿ.ಓ (ಸರ್ಕಾರೇತರ ಸಂಸ್ಥೆ)ಗಳ ಸಹಕಾರದೊಂದಿಗೆ ಅಧಿಕಾರಿಗಳು ಜಿಲ್ಲೆಯಲ್ಲಿ ಮ್ಯಾನುವಲ್ ಸ್ಕ್ಯಾವೆಂಜರ್ ಸಮೀಕ್ಷೆ ಕಾರ್ಯ ನಡೆಸಬೇಕು. ಯಾವುದೇ ಗೊಂದಲಕ್ಕೆ ಎಡೆ ಮಾಡಿಕೊಡದಂತೆ ಸಮೀಕ್ಷೆ ಕಾರ್ಯ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತಡಿದರು. ಈ ಹಿಂದೆ ಜಿಲ್ಲೆಯಲ್ಲಿ ಯಾವುದೇ ಮ್ಯಾನುವಲ್ ಸ್ಕ್ಯಾವೆಂಜರ್ ಕಾರ್ಯ ಮಾಡುವವರು ಇಲ್ಲ ಎಂದು ಮಾಹಿತಿ ನೀಡಲಾಗಿದೆ. ಆದರೆ ಸ್ವರ್ವೋಚ್ಛ ನ್ಯಾಯಾಲಯ ದೇಶಾದ್ಯಂತ ಮತ್ತೊಮ್ಮೆ ಮ್ಯಾನುವಲ್ ಸ್ಕ್ಯಾವೆಂಜಿಂಗ್ ಕಾರ್ಯ ಮಾಡುವವರ ಕುರಿತು ಸಮೀಕ್ಷೆ ನಡೆಸುವಂತೆ ನಿರ್ದೇಶನ ನೀಡಿದೆ. ಈ ಹಿನ್ನಲೆಯಲ್ಲಿ ಸರ್ವೇ ಕಾರ್ಯ ಕೈಗೊಂಡು ನಮಸ್ತೆ(ಓಂಒಂಖಖಇ) ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕಿದೆ. ಅನೈರ್ಮಲ್ಯ ಕೆಲಸ ನಿರ್ವಹಿಸುತ್ತಿದ್ದ ಕುರಿತು ಸಲ್ಲಿಕೆಯಾದ ಸ್ವಯಂ ಘೋಷಿತ ಅರ್ಜಿಗಳನ್ನು ಪರಿಶೀಲನೆ ಮಾಡುವಾಗ ನಿಯಮಾನುಸಾರ ಸ್ಥಳಕ್ಕೆ ಭೇಟಿ ನೀಡಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿನ ಪ್ರಚಾರ ನೀಡುವ ಮೂಲಕ ಸರ್ವೇ ಕಾರ್ಯ ನಡೆಸಬೇಕು. ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಹಾಗೂ ನಗರಾಭಿವೃದ್ಧಿ ಕೋಶದ ಅಧಿಕಾರಿಗಳನ್ನು ಸರ್ವೇ ಕಾರ್ಯದ ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ಅಕ್ಟೋಬರ್03ರಿಂದ10ನೇತಾರೀಕಿನವರೆಗೆ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಮೀಕ್ಷೆ ಕುರಿತು ವ್ಯಾಪಕ ಪ್ರಚಾರ ನಡೆಸಲಾಗುವುದು. ಇದಕ್ಕಾಗಿ ಆಂದೋಲನ ಹಮ್ಮಿಕೊಳ್ಳಲಾಗುವುದು. ಪ್ರಮುಖ ಸ್ಥಳಗಳಲ್ಲಿ ಬ್ಯಾನರ್ ಹಾಗೂ ಜಾಹೀರಾತು ಫಲಕಗಳನ್ನು ಅಳವಡಿಕೆ ಮಾಡಲಾಗುವುದು. ಕಸ ಸಂಗ್ರಹ ವಾಹನಗಳಲ್ಲಿ ಆಡಿಯೋ ಜಿಂಗಲ್‌ಗಳನ್ನು ಪ್ರಸಾರ ಮಾಡಲಾಗುವದು. ಅಕ್ಟೋಬರ್ 14 ರಂದು ಆಂದೋಲನಗಳಲ್ಲಿ ಸ್ವಯಂ ಘೋಷಿತ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಅಕ್ಟೋಬರ್ 15 ರಿಂದ 19 ವರೆಗೆ ಸ್ವಯಂ ಘೋಷಿತ ಅರ್ಜಿಗಳ ಪರಿಶೀಲನೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಕಳುಹಿಸಿಕೊಡಲಾಗುವುದು. ಅಕ್ಟೋಬರ್ 21 ರಿಂದ 23 ವರೆಗೆ ಈ ಅರ್ಜಿಗಳ ಕುರಿತು ಸ್ಥಳ ಪರಿಶೀಲನೆ, ಪೋರ್ಟಲ್ ನಲ್ಲಿ ಮಾಹಿತಿ ಅಳವಡಿಕೆ ಹಾಗೂ ಸರ್ವೇ ಕಾರ್ಯ ನಡೆಸಲಾಗುವುದು. ನಂತರ ಕ್ರೂಢೀಕೃತ ತಾತ್ಕಾಲಿಕ ಪಟ್ಟಿ ಸಿದ್ದಪಡಿಸಿ ಆಕ್ಷೇಪಣೆ ಸಲ್ಲಿಸಲು ಅಕ್ಟೋಬರ್ 23 ರಿಂದ ನವೆಂಬರ್ 7 ವರೆಗೆ 15 ದಿನಗಳ ಕಾಲಾವಕಾಶ ನೀಡಲಾಗುವುದು. ನಂತರ ನವೆಂಬರ್ 8 ರಿಂದ 9 ತಾರೀಕಿನಂದು ಆಕ್ಷೇಪಣೆಗಳನ್ನು ಪರಿಶೀಲಿಸಿ ಮ್ಯಾನುವಲ್ ಸ್ಕ್ಯಾವೆಂಜಿಗ್ ಕಾರ್ಯ ಮಾಡುವವರ ಅಂತಿಮ ಪಟ್ಟಿ ಸಿದ್ದಪಡಿಸಲಾಗುವುದು. ನವೆಂಬರ್ 11 ರಿಂದ 16 ರ ಒಳಗೆ ಜಿಲ್ಲಾ ಮಟ್ಟದ ಸಮೀಕ್ಷಾ ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗುವುದು. ನಂತರ ಅನುಮೋದನೆ ಪಡೆದ ಪಟ್ಟಿಯನ್ನು ಪ್ರಕಟಿಸಿ ನಮಸ್ತೆ ಸರ್ವೇ ಪೋರ್ಟಲ್‌ನ ಎ.ಎಸ್. ಸರ್ವೇ ಆಪ್‌ನಲ್ಲಿ ಅಪ್‌ಲೋಡ್ ಮಾಡುವುದಾಗಿ ತಿಳಿಸಿದರು.



ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ನಗರಾಭಿವೃದ್ಧಿ ಕೋಶದಯೋಜನಾನಿರ್ದೇಶಕಮಹೇಂದ್ರ ಕುಮಾರ್, ಮ್ಯಾನುವಲ್ ಸ್ಕ್ಯಾವೆಂಜರ್ ಹಾಗೂ ಸಫಾಯಿ ಕರ್ಮಚಾರಿ ಸೇವಾ ಸಮಿತಿಯ ಕೆ.ರಾಜಣ್ಣ, ನಳೀನ.ಆರ್, ಶ್ರೀನಿವಾಸ, ರಜಿನಿಕಾಂತ್ ಸೇರಿದಂತೆ ನಗರಸಭೆ, ತಾಲ್ಲೂಕು ಪಂಚಾಯಿತಿ, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ರಾಮನಗರ ಗಾಂಧಿ ಭವನದಲ್ಲಿ ಸ್ವಚ್ಛತಾ ನಡಿಗೆ, ಸರ್ವಧರ್ಮ ಪ್ರಾರ್ಥನೆ, ಸಚಿವರಿಂದ ಸಂದೇಶ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ್ 2 ರಂದು ಬೆಳಿಗ್ಗೆ 10.00 ಗಂಟೆಗೆ ದಾವಣಗೆರೆ ರಾಮನಗರದಲ್ಲಿನ ಗಾಂಧಿ ಭವನದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ 155 ನೇ ಜನ್ಮ ದಿನಾಚರಣೆ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀಜಿಯವರ ಜನ್ಮ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಸ್ವಚ್ಛತಾ ನಡಿಗೆ, ಸರ್ವಧರ್ಮ ಪ್ರಾರ್ಥನೆ ಹಾಗೂ ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮ ಆಯೋಜಿಸಲಾಗಿದೆ ಬೆಳಗ್ಗೆ 10 ಗಂಟೆಗೆ ರಾಷ್ಟ್ರಧ್ವಜಾರೋಹಣದೊಂದಿಗೆ ಸ್ವಚ್ಛತಾ ನಡಿಗೆ ಆರಂಭವಾಗಿ ನಂತರ ಸ್ವಚ್ಛತೆಯ ಶ್ರಮಾದಾನ ನಂತರ ಸ್ವಚ್ಛತೆ ಕುರಿತು ಪ್ರತಿಜ್ಞಾವಿಧಿ ಸ್ವೀಕರಿಸಲಾಗುತ್ತದೆ. ನಂತರ ಗಾಂಧಿ ಭವನದ ಸಭಾಂಗಣದಲ್ಲಿ ಸರ್ವಧರ್ಮ ಪ್ರಾರ್ಥನೆ, ಭಜನ್ ಗೀತೆಗಳು, ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ, ವಿದ್ಯಾಥಿಗಳಿಂದ ಗಾಂಧಿ ಕುರಿತು ಭಾಷಣ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಿಂದ ಜಯಂತಿ ಕುರಿತು ಸಂದೇಶವಿರುತ್ತದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟನೆ ಮಾಡುವರು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಚನ್ನಗಿರಿ ಶಾಸಕರಾದ ಬಸವರಾಜು ವಿ.ಶಿವಗಂಗಾ, ಜಗಳೂರು ಶಾಸಕರಾದ ಬಿ.ದೇವೇಂದ್ರಪ್ಪ ಹರಿಹರ ಶಾಸಕರಾದ ಬಿ.ಪಿ.ಹರೀಶ್, ಹೊನ್ನಾಳಿ ಶಾಸಕರಾದ ಡಿ.ಜಿ.ಶಾಂತನಗೌಡ, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್.ಅರಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ದಾವಣಗೆರೆ ಮಹಾನಗರ ಪಾಲಿಕೆ ಮಹಾಪೌರರಾದ ಚಮನ್ ಸಾಬ್ ಕೆ, ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಭಾಗವಹಿಸುವರು.

### ಮೃತ ಕಾರ್ಯದರ್ಶಿ ಕುಟುಂಬಕ್ಕೆ ನೆರವು

» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಜುಂಜರಗುಂಟೆ ಹಾಲು ಒಕ್ಕೂಟದ ಕಾರ್ಯದರ್ಶಿಯಾಗಿದ್ದ ಎನ್.ನಾಗರಾಜ ಅನಾರೋಗ್ಯ ನಿಮಿತ್ತ ಮೃತಪಟ್ಟ ಹಿನ್ನೆಲೆಯಲ್ಲಿ ಶಿವಮೊಗ್ಗ ಹಾಲು ಒಕ್ಕೂಟ ಪರಿಹಾರ ನಿಧಿಯಿಂದ ಒಂದು ಲಕ್ಷದ ಚೆಕನ್ನು ಶಿವಮೊಗ್ಗ ಹಾಲು ಒಕ್ಕೂಟದ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಮೃತನ ಪತ್ನಿ ಪ್ರೇಮಕ್ಕರವರಿಗೆ ಕಚೇರಿಯಲ್ಲಿ ವಿತರಣೆ ಮಾಡಿದರು. ಕಳೆದ ಹಲವಾರು ವರ್ಷಗಳಿಂದ ಶಿವಮೊಗ್ಗ ಹಾಲು ಒಕ್ಕೂಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು, ಸಿಬ್ಬಂದಿ ಹಾಗೂ ನೌಕರರ ವರ್ಗ, ಕರ್ತವ್ಯದಲ್ಲಿ ಸಂದರ್ಭದಲ್ಲಿ ಮೃತಪಟ್ಟರೆ ಪರಿಹಾರದ ಚೆಕನ್ನು ಕೂಡಲೇ ವಿತರಣೆ ಮಾಡಲಾಗುತ್ತದೆ. ಜುಂಜರಗುಂಟೆ ಹಾಲು ಒಕ್ಕೂಟದಕಾರ್ಯದರ್ಶಿ ಎನ್.ನಾಗರಾಜ ಮೃತಪಟ್ಟ ಬಗ್ಗೆ ಮಾಹಿತಿ ಪಡೆದು ಕೂಡಲೇ ಹಾಲು ಒಕ್ಕೂಟದ ಅಧ್ಯಕ್ಷರು ಹಾಗೂ ವ್ಯವಸ್ಥಾಪಕರ ನಿರ್ದೇಶಕ ಗಮನಕ್ಕೆ ತಂದು ಅವರ ಕುಟುಂಬಕ್ಕೆ ಚೆಕ್ ಹಸ್ತಾಂತರ ಮಾಡಲಾಯಿತು ಎಂದರು. ಈ ಸಂದರ್ಭದಲ್ಲಿ ಜುಂಜರಗುಂಟೆ ಹಾಲು ಒಕ್ಕೂಟದ ಅಧ್ಯಕ್ಷ ವೀರಭದ್ರಪ್ಪ, ವಿಸ್ತರಣಾಧಿಕಾರಿ ನಯಾಜ್‌ಬೇಗ್ ಮುಂತಾದವರು ಉಪಸ್ಥಿತರಿದ್ದರು.

### ಬಸ್ ಡಿಕ್ಕಿ ತಪ್ಪಿಸಲು ಹೋಗಿ ಆಟೋ ಪಲ್ಟಿ: ಆಟೋಚಾಲಕ ಸಾವು

» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಜುಂಜರಗುಂಟೆ ಗೇಟ್ ಬಳಿ ವೇಗವಾಗಿ ಬಂದ ಬಸ್ಸು ಅಪ್ಪಳಿಸುವುದನ್ನು ಆಟೋವನ್ನು ಎಡಕ್ಕೆ ಚಲಿಸಿದ ಸಂದರ್ಭದಲ್ಲಿ ಪಲ್ಟಿಯಾದ ಆಟೋದಿಂದ ಕೆಳಗೆ ಬಿದ್ದು ಆಟೋಚಾಲಕ ಬೊಂಬೇರಹಳ್ಳಿಯ ವಿ.ಮಂಜುನಾಥ(24) ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಈ ಬಗ್ಗೆ ದೂರು ನೀಡಿರುವ ಅದೇ ಗ್ರಾಮದ ರಾಜೇಂದ್ರ ಆಟೋದ ಎದುರಿಗೆ ವೇಗವಾಗಿ ಬಂದ ಬಸ್‌ನ ಡಿಕ್ಕಿಯನ್ನು ತಪ್ಪಿಸಲು ಆಟೋಚಾಲಕ ಪ್ರಯತ್ನಿಸಿ ಕೆಳಗೆ ಬಿದ್ದು ಮೃತಪಟ್ಟಿದ್ದಾನೆ. ಈ ಬಗ್ಗೆ ಕಾನೂನು ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದು ಪಿಎಸ್‌ಐ ಎನ್. ಕೆ.ಬಸವರಾಜು ಪ್ರಕರಣ ದಾಖಲಿಸಿದ್ದಾರೆ.

---

**ವಿಶ್ವ ಹಿರಿಯ ನಾಗರೀಕರ ದಿನಾಚರಣೆಯಲ್ಲಿ ಉಪ ವಿಭಾಗಾಧಿಕಾರಿ ಎಂ.ಕಾರ್ತಿಕ್**

# ಹಿರಿಯ ನಾಗರೀಕರ ಜೀವನಾನುಭವ, ಪಾಠ ಜೀವನದಲ್ಲಿ ಅಳವಡಿಸಿಕೊಂಡಾಗ ಉತ್ತಮ ಸಮಾಜ ನಿರ್ಮಾಣ ಸಾಧ್ಯ

» ಚಿತ್ರದುರ್ಗ

ಸಮಾಜದಲ್ಲಿ ಪ್ರತಿಯೊಬ್ಬ ನಾಗರಿಕರು, ವಿದ್ಯಾರ್ಥಿಗಳು, ಯುವಕರು ಹಿರಿಯ ನಾಗರೀಕರ ಉತ್ತಮ ಜೀವನ ಅನುಭವದ ಪಾಠಗಳನ್ನು ತಮ್ಮ ಜೀವನದಲ್ಲಿ ರೂಢಿಸಿಕೊಂಡಾಗ ಮಾತ್ರ ಅದ್ಭುತವಾದ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯ ಎಂದು ಉಪ ವಿಭಾಗಾಧಿಕಾರಿ ಎಂ ಕಾರ್ತಿಕ್ ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಜಿಲ್ಲಾ ಸಂಘ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಮಂಗಳವಾರ ನಗರದ ತ.ರಾ.ಸು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ಜೀವಿಗಳಿಗೆ ಆರೋಗ್ಯ ಮತ್ತು ಬೆಂಬಲ ಸುವ್ಯವಸ್ಥೆಗಳನ್ನು ಸದೃಢವಾಗಿ ಒದಗಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಹಿರಿಯ ನಾಗರೀಕರಿಗೆ ತಮ್ಮ ಮಕ್ಕಳು ಸರಿಯಾಗಿ ನೋಡಿಕೊಳ್ಳುತ್ತಿಲ್ಲ ಹಾಗೂ ಮಾನಸಿಕವಾಗಿ, ದೈಹಿಕವಾಗಿ ತೊಂದರೆಗಳು ನೀಡಿದಲ್ಲಿ ಆತಂಕ ಬೇಡ. ಉಪವಿಭಾಗಾಧಿಕಾರಿಗಳ ಹಂತದಲ್ಲಿ ಹಿರಿಯ ನಾಗರೀಕರ ಕಾಯ್ದೆಯಡಿ ದಾವೆ ಹೂಡಿ ಸಮಸ್ಯೆ ಪರಿಹರಿಸಿಕೊಳ್ಳಬಹುದು. ಸಮಾಜದಲ್ಲಿ ಪ್ರಸ್ತುತ ಇಷ್ಟೆಲ್ಲಾ ಕಾನೂನು ಸುವ್ಯವಸ್ಥೆ ಇದ್ದರೂ ಸಹ, ತಮ್ಮ ಮಕ್ಕಳ ಲಾಲನೆ- ಪಾಲನೆ ಮಾಡಿ ಸರ್ವಸ್ವವನ್ನು ಧಾರೆ ಎರೆದ ಪೋಷಕರ ಬಗ್ಗೆ ಕಾಳಜಿ ವಹಿಸದೇ ಇರುವುದು ಬೇಸರದ ಸಂಗತಿ ಎಂದು ಮರುಕ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಆರ್.ರಂಗಪ್ಪರೆಡ್ಡಿ ಮಾತನಾಡಿ, ಹಿರಿಯ ನಾಗರೀಕರಿಗಾಗಿ ಸರ್ಕಾರವು ಮತ್ತಷ್ಟು ವಿವಿಧ ರೀತಿಯ ಯೋಜನೆಗಳನ್ನು ರೂಪಿಸಬೇಕು. ಯುವ ಪೀಳಿಗೆ ಹಿರಿಯರ ಬಗ್ಗೆ ಗೌರವಯುತವಾದ ಮನೋಭಾವ ಹೊಂದಿರಬೇಕು. ಸರ್ಕಾರಿ ಕಚೇರಿಗಳಲ್ಲಿ ಹಿರಿಯ ನಾಗರೀಕರನ್ನು ಆತ್ಮೀಯತೆಯಿಂದ ಕಾಣಬೇಕು ಎಂದು ಮನವಿ ಮಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ಹಿರಿಯ ನಾಗರೀಕರು ತಮ್ಮ ಕುಟುಂಬ, ಸಮಾಜ, ಸಮುದಾಯಕ್ಕೆ ನೀಡಿದ ಕೊಡುಗೆಗಳ ಪ್ರತೀಕವಾಗಿ 1991 ರಿಂದ ವಿಶ್ವ ಹಿರಿಯ ನಾಗರೀಕರ ದಿನಾಚರಣೆ ಆಚರಿಸಲಾಗುತ್ತಿದೆ. ಹಿರಿಯ ನಾಗರೀಕರಿಗೆ ವಯಸ್ಸಾದಂತೆ ದೈಹಿಕ, ಮಾನಸಿಕ ಒತ್ತಡ ಹೆಚ್ಚಾಗುತ್ತದೆ. ತಮ್ಮ ಜೀವನಕ್ಕೆ ಧಕ್ಕೆಯಾಗದಂತೆ ವಿವಿಧ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣದ ಜೊತೆಗೆ ಉತ್ತಮವಾದ ಸಂಸ್ಕಾರವನ್ನು ರೂಢಿಸಿದರೆ ಮುಂದಿನ ಜೀವನ ಸುಖಕರವಾಗುವುದು ಎಂದರು. ಇದೇ ಸಂದರ್ಭದಲ್ಲಿ ಇತ್ತೀಚೆಗೆ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಹಿರಿಯ ನಾಗರೀಕರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನಗಳಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪತ್ರ ಹಾಗೂ ಪಾರಿತೋಷಕಗಳನ್ನು ನೀಡಿ ಗೌರವಿಸಲಾಯಿತು.

ವಿಕಲಚೇನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಡಿ.ಸಿ.ಸೋಮಶೇಖರಯ್ಯ ಸ್ವಾಗತಿಸಿದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ ವಂದಿಸಿದರು. ಮೂರ್ತಿ ಹಾಗೂ ತಂಡದವರು ಗೀತ ಗಾಯನ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿಲ್ಲಾ ಪಂಚಾಯತ್ ಸಹ ಕಾರ್ಯದರ್ಶಿ ರವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ವಿಜಯ್ ಕುಮಾರ್, ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎನ್.ಸುಧಾ ಹಿರಿಯ ನಾಗರೀಕರು ಹಾಗೂ ವಿಶೇಷ ಚೇತನರು ಉಪಸ್ಥಿತರಿದ್ದರು.

---

# ಹಿರಿಯ ನಾಗರಿಕರ ಬಗ್ಗೆ ನಿರ್ಲಕ್ಷ್ಯ ಬೇಡ, ಆರ್ಥಿಕ ಭದ್ರತೆ, ಸಾಮಾಜಿಕ ರಕ್ಷಣೆ ಬೇಕಿದೆ; ಬಸವಂತಪ್ಪ

» ದಾವಣಗೆರೆ

ಪ್ರಸ್ತುತ ದಿನಗಳಲ್ಲಿ ವಿದ್ಯಾವಂತರಿಂದಲೇ ಹಿರಿಯ ನಾಗರಿಕರು ಹೆಚ್ಚಿನ ನಿರ್ಲಕ್ಷ್ಯಕ್ಕೆ ಒಳಗಾಗುತ್ತಿರುವುದರಿಂದ ಅವರಿಗೆ ಆರ್ಥಿಕ ಭದ್ರತೆ ಹಾಗೂ ಸಾಮಾಜಿಕ ರಕ್ಷಣೆ ಒದಗಿಸುವತ್ತ ಗಮನ ನೀಡಬೇಕಿದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.



ಅವರು(ಅ.1) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಹಿರಿಯ ನಾಗರಿಕರ ಸಂಘ ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ, ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಗರದ ಶ್ರೀ ಸದ್ಯೋಜಾತ ಶಿವಾಚಾರ್ಯ ಮಹಾಸ್ವಾಮಿಗಳ ಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಂಸ್ಕೃತಿ, ಸಂಪ್ರದಾಯಗಳಿಗೆ ಹೆಚ್ಚು ಬೆಲೆಕೊಡುವ ನಮ್ಮ ದೇಶದಲ್ಲಿ ಹಿರಿಯ ನಾಗರಿಕರನ್ನು ನಿರ್ಲಕ್ಷಿಸುವ ಮನೋಭಾವ ತರವಲ್ಲ, ಅನುಭವವಿರುವ ಹಿರಿಯ ನಾಗರಿಕರ ಮಾರ್ಗದರ್ಶನ ನಮಗೆ ಬೇಕಾಗುತ್ತದೆ. ಹೀಗಾಗಿ ಅವರ ಗೌರವಕ್ಕೆ ಧಕ್ಕೆ ಬಾರದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಯುಷ್ ಇಲಾಖೆಗಳ ಸಹಯೋಗದೊಂದಿಗೆ ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ ನಡೆಸಲಾಯಿತು.

---

## ಲೋಕಾಯುಕ್ತ ಎಡಿಜಿಪಿ ವಿರುದ್ಧ ಕಾನೂನು ಕ್ರಮ ಕೈಗೊಳಿ: ತಿಪ್ಪೇಸ್ವಾಮಿ



» ಚಳ್ಳಕೆರೆ

ಕರ್ನಾಟಕ ಲೋಕಾಯುಕ್ತ ವಿಶೇಷ ತನಿಖಾದಳದ ಎಡಿಜಿಪಿಯಾಗಿ ಕಾರ್ಯನಿರ್ವಹಿಸುತ್ತಿರುವ ಎಂ.ಚಂದ್ರಶೇಖರ್‌ರವರ ಕಾನೂನು ಬಾಹಿರ ಚಟುವಟಿಕೆ ಮತ್ತು ಅಕ್ರಮ ಆಸ್ತಿ ಗಳಿಕೆಯ ಬಗ್ಗೆ ಪತ್ರಿಕಾ ಹೇಳಿಕೆ ನೀಡಿದ ಕೇಂದ್ರ ಉಕ್ಕುಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿಯವರ ಟೀಕೆಯ ಬಗ್ಗೆ ಅವಹೇಳನಕಾರಿಯಾಗಿ ಪತ್ರದ ಮೂಲಕದ ಉತ್ತರ ನೀಡಿರುವ ಎಡಿಜಿಪಿ ಚಂದ್ರಶೇಖರ್‌ರವರನ್ನು ಸೇವೆಯಿಂದ ಅಮಾನತ್ತು ಹಾಗೂ ತನಿಖೆ ನಡೆಸುವಂತೆ ಒತ್ತಾಯಿಸಿ ತಾಲ್ಲೂಕು ಜಾತ್ಯಾತೀಯ ಜನತಾದಳ ಬೃಹತ್ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಮನವಿ ನೀಡಿದರು. ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ನೇತೃತ್ವದಲ್ಲಿ ಸುಮಾರು 200ಕ್ಕೂ ಹೆಚ್ಚು ಜೆಡಿಎಸ್ ಕಾರ್ಯಕರ್ತರು ವಾಲ್ಮೀಕಿ ವೃತ್ತದಿಂದ ಮೋಟಾರ್ ಬೈಕ್ ರ್‍ಯಾಲಿ ಮೂಲಕ ಆಗಮಿಸಿ ಅಂಬೇಡ್ಕರ್, ನೆಹರೂ ವೃತ್ತದ ಮೂಲಕ ತಾಲ್ಲೂಕು ಕಚೇರಿಗೆ ತೆರಳಿ ತಹಶೀಲ್ದಾರ್‌ಗೆ ಮನವಿ ನೀಡಿದರು.

---

## ಪ್ರಮುಖ ಸುದ್ದಿ

**ದಾವಣಗೆರೆ ನಗರದಲ್ಲಿ 11 ಕೇಂದ್ರಗಳಲ್ಲಿ 6512 ಅಭ್ಯರ್ಥಿಗಳು ನೊಂದಣಿ, ಸುಗಮ ಪರೀಕ್ಷೆ ನಡೆಸಲು ಕಟ್ಟೆಚ್ಚರ**

# ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅ.3 ರಂದು ಪಿಎಸ್‌ಐ ಪರೀಕ್ಷೆ

» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಕ್ಟೋಬರ್ 3 ರಂದು ಪಿಎಸ್‌ಐ ಪರೀಕ್ಷೆ ನಡೆಯಲಿದ್ದು ದಾವಣಗೆರೆ ನಗರದ 11 ಕೇಂದ್ರಗಳಲ್ಲಿ 6512 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು ಪರೀಕ್ಷೆಯಲ್ಲಿ ಕಟ್ಟೆಚ್ಚರವಹಿಸಿ ಯಾವುದೇ ದೂರು, ಅಕ್ರಮಗಳು ನಡೆಯದಂತೆ ಕಟ್ಟೆಚ್ಚರ ವಹಿಸುವಂತೆ ಜಿಲ್ಲಾಧಿಕಾರಿಗಳಾದ ಜಿ.ಎಂ. ಗಂಗಾಧರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅವರು ಅ.1 ರಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪರೀಕ್ಷಾ ಪೂರ್ವ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಕ್ಟೋಬರ್ 3 ರಂದು ಪಿಎಸ್‌ಐ ಹುದ್ದೆಗಳ ಆಯ್ಕೆಗೆ 2 ಅವಧಿಯಲ್ಲಿ ಪರೀಕ್ಷೆ ನಡೆಯಲಿದೆ. ಬೆಳಿಗ್ಗೆ 10–30 ರಿಂದ ಮಧ್ಯಾಹ್ನ 12 ಗಂಟೆವರೆಗೆ ಪತ್ರಿಕೆ–1ರ ಪರೀಕ್ಷೆ ನಡೆಯಲಿದೆ. ನಂತರ ಮಧ್ಯಾಹ್ನ 12–30 ರಿಂದ 2ಗಂಟೆವರೆಗೆ 2 ನೇ ಅವಧಿಯ ಪತ್ರಿಕೆ–2ರ ಪರೀಕ್ಷೆ ನಡೆಯಲಿದೆ. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳನ್ನು ತಪಾಸಣೆಗೆ ಒಳಪಡಿಸುವ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಕನಿಷ್ಠ ಎರಡು ಗಂಟೆಗೂ ಮೊದಲು ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು. ಅಲ್ಲದೇ ಬೆಳಿಗ್ಗೆ 9–45ರ ನಂತರ ಯಾವುದೇ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದ ಆವರಣವನ್ನು ಪ್ರವೇಶಿಸಲು ಅನುಮತಿಸುವುದಿಲ್ಲ ಎಂದು ತಿಳಿಸಿದರು.

ಮೊದಲನೆ ಪತ್ರಿಕೆಯ ನಂತರ ಎರಡನೇ ಪತ್ರಿಕೆ ಪ್ರಾರಂಭ ಅಗುವ ಮೊದಲು ಇರುವ ಮೂವತ್ತು ನಿಮಿಷಗಳ ಕಾಲಾವಧಿಯಲ್ಲಿ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಿಂದ ಹೊರ ಹೋಗಲು ಅನುಮತಿಸುವುದಿಲ್ಲ. ಅಭ್ಯರ್ಥಿಗಳು ತಮ್ಮೊಡನೆ ವೈದ್ಯಕೀಯ ಔಷಧಿ, ಮಾತ್ರೆಗಳನ್ನು ಮಾತ್ರ ತೆಗೆದುಕೊಂಡು ಹೋಗಬೇಕೆಂದು ಮಾಹಿತಿ ನೀಡಿದರು.

ಅಭ್ಯರ್ಥಿಯು ಪರೀಕ್ಷಾ ಕೇಂದ್ರಕ್ಕೆ ಆಗಮಿಸುವ ಮೊದಲ ತಪಾಸಣೆಗೆ ಒಳಗಾಗಬೇಕು, ಅಭ್ಯರ್ಥಿಯು ಕೇಂದ್ರದ ಆವರಣವನ್ನು ಪ್ರವೇಶಿಸಿದ ತಕ್ಷಣ, ಪೆಂಡಾಲಿನಲ್ಲಿ ಅವರು ತರುವ ವಸ್ತುಗಳನ್ನು ಇರಿಸಿಕೊಳ್ಳಲು ಮತ್ತು ತಪಾಸಣೆಗೆ ಒಳಗಾಗಲು ವ್ಯವಸ್ಥೆ ಮಾಡಬೇಕು, ಯಾವುದೇ ಕಾರಣಕ್ಕೆ ಪರೀಕ್ಷಾರ್ಥಿಗಳು ಒಮ್ಮೆ ಪೆಂಡಾಲ್‌ನೊಳಗೆ ತಮ್ಮ ವಸ್ತುಗಳನ್ನು ನೀಡಿದ ನಂತರ ಮತ್ತೆ ಮರಳಿ ಪಡೆಯಲು ಅನುಮತಿಸಬಾರದು. ಅಲ್ಲದೇ ಪರೀಕ್ಷೆ ಮುಗಿದ ನಂತರವೇ ಅವರ ವಸ್ತುಗಳನ್ನು ಮರಳಿ ಪಡೆಯಬೇಕು ಎಂದು ಹೇಳಿದರು. ಅದರಲ್ಲೂ ಮುಖ್ಯವಾಗಿ ವಿರಾಮದ ಸಮಯದಲ್ಲಿ ಅವರಿಗೆ ಪ್ರತಿ ಅಭ್ಯರ್ಥಿಗಳಿಗೆ ಬಾಳೆಹಣ್ಣು ಮತ್ತು ಬಿಸ್ಕತ್ತು ಪ್ಯಾಕನ್ನು ಸರಬರಾಜು ಮಾಡಬೇಕು. ಪರೀಕ್ಷೆಯ ಕರ್ತವ್ಯಕ್ಕಾಗಿ ಒಬ್ಬ ಸ್ಕ್ವಾಡ್, ಒಬ್ಬ ವೀಕ್ಷಕ ಮತ್ತು ಒಬ್ಬ ಕಸ್ಟೋಡಿಯನ್‌ರನ್ನುಗೊತ್ತುಪಡಿಸಲಾಗಿದೆ. ವಿರಾಮದ ವೇಳೆಯಲ್ಲಿಯೂ ಕೊಠಡಿ ಮೇಲ್ವಿಚಾರಕರು ಕೊಠಡಿಯಲ್ಲಿರಬೇಕು, ಯಾವುದೇ ಕಾರಣಕ್ಕೂ ರಿಲೀವರ್ ಇಲ್ಲದೇ ಕೊಠಡಿ ಬಿಡುವಂತಿಲ್ಲ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮಾತನಾಡಿ, ಪರೀಕ್ಷಾ ಕೇಂದ್ರಕ್ಕೆ ಆಗಮಿಸುವ ಪ್ರತಿಯೊಬ್ಬ ಪರೀಕ್ಷಾರ್ಥಿಯ ಕಿವಿಗಳನ್ನು ತಪಾಸಣೆ ಮಾಡುವ ಹಿನ್ನೆಲೆಯಲ್ಲಿ ಪ್ರತಿಯೊಂದು ಪರೀಕ್ಷಾ ಕೇಂದ್ರಕ್ಕೆ ಇ.ಎನ್.ಟಿ.ತಜ್ಞರನ್ನು ನೇಮಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿಗಳನ್ನು ಕಡ್ಡಾಯವಾಗಿ ಅಳವಡಿಸಬೇಕು. ಅಲ್ಲದೇ ಅವುಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರಬೇಕು ಎಂದರು.

ಯಾವುದೇ ಅಭ್ಯರ್ಥಿ ಒಮ್ಮೆ ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ಪಡೆದ ನಂತರ ಮತ್ತೆ ಹೊರಗೆ ಹೋಗುವಂತಿಲ್ಲ. ಯಾವುದೇ ಎಲೆಕ್ಟ್ರಾನಿಕ್ ಡಿವೈಸ್ ಇರುವ ಬಗ್ಗೆ ಅಭ್ಯರ್ಥಿಯ ಮೇಲೆ ಅನುಮಾನ ಕಂಡು ಬಂದರೆ ಪೊಲೀಸ್ ಅಧಿಕಾರಿಗಳ ಸಹಾಯದೊಂದಿಗೆ ಚೆಕ್ ಮಾಡಬೇಕು. ಅಲ್ಲದೇ ಪರೀಕ್ಷಾ ಕೇಂದ್ರದ ಒಳಗೆ ನಕಲು ಮಾಡುತ್ತಿರುವ ಬಗ್ಗೆ ಅನುಮಾನ ಬಂದರೆ ತಕ್ಷಣವೇ ಅವರನ್ನು ಪರೀಕ್ಷಾ ಕೊಠಡಿಯಿಂದ ಹೊರಗೆ ಕರೆ ತಂದು ಪೊಲೀಸ್ ಅಧಿಕಾರಿಗಳ ಸಹಕಾರದೊಂದಿಗೆ ತಪಾಸಣೆ ಮಾಡಬೇಕು ಎಂದು ಹೇಳಿದರು.

**ಪುರುಷ ಅಭ್ಯರ್ಥಿಗಳ ವಸ್ತ್ರಸಂಹಿತೆ:** ಪರೀಕ್ಷೆಯ ದಿನದಂದು ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಧರಿಸುವುದನ್ನು ಖಚಿತ ಪಡಿಸಿಕೊಳ್ಳಬೇಕು. ಸಾಧ್ಯವಾದಷ್ಟು ಕಾಲರ್‌ರಹಿತ ಶರ್ಟ್ ಧರಿಸಲು ಆದ್ಯತೆ ನೀಡುವುದು. ಪ್ಯಾಂಟ್ ಮತ್ತು ಸರಳ ಪ್ಯಾಂಟ್ (ಜೇಬುಗಳು ಇಲ್ಲದಿರುವ/ ಕಡಿಮೆ ಜೇಬುಗಳಿರುವ) ಪುರುಷ ಅಭ್ಯರ್ಥಿಗಳಿಗೆ ಆದ್ಯತೆಯ ಡ್ರೆಸ್ ಕೋಡ್ ಆಗಿದೆ. ಕುರ್ತಾ ಪೈಜಾಮ, ಜೀನ್ಸ್ ಪ್ಯಾಂಟ್ ಅನುಮತಿಸುವುದಿಲ್ಲ. ಪುರುಷ ಅಭ್ಯರ್ಥಿಗಳು ಧರಿಸುವ ಬಟ್ಟೆಗಳು ಹಗುರವಾಗಿರಬೇಕು ಅಂದರೆ ಜಿಪ್ ಪಾಕೆಟ್‌ಗಳು, ಪಾಕೆಟ್‌ಗಳು, ದೊಡ್ಡ ಬಟನ್‌ಗಳು ಮತ್ತು ವಿಸ್ತಾರವಾದ ಕಸೂತಿ ಇರುವ ಬಟ್ಟಗಳು ಇರಬಾರದು. ಪರೀಕ್ಷಾ ಹಾಲ್ ಒಳಗೆ ಶೂಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗ ಇರುವ ಚಪ್ಪಲಿಗಳನ್ನು ಧರಿಸುವುದು ಸೂಕ್ತ. ಅಭ್ಯರ್ಥಿಗಳು ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣಗಳನ್ನು ಧರಿಸುವುದು ಅಥವಾ ಕಿವಿಯೋಲೆಗಳು, ಉಂಗುರಗಳು ಮತ್ತು ಕಡಗಗಳನ್ನು ಧರಿಸುವುದು ನಿಷೇಧಿಸಲಾಗಿದೆ.

**ಮಹಿಳಾ ಅಭ್ಯರ್ಥಿಗಳ ವಸ್ತ್ರ ಸಂಹಿತೆ:** ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ. ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು, ಜೀನ್ಸ್ ಪ್ಯಾಂಟ್ ಧರಿಸಬಾರದು, ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಅವರಿಗೆ ಮುಜುಗರವಾಗದಂತೆ ಮತ್ತು ನಾವು ಉಲ್ಲೇಖಿಸಿರುವ ನಿಯಮದಂತೆ ಧರಿಸುವಂತೆ ನಿರ್ದೇಶಿಸಲಾಗಿದೆ.

ಎತ್ತರವಾದ ಹಿಮ್ಮಡಿಯ ಶೂಗಳನ್ನು, ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ, ಚಪ್ಪಲಿಗಳನ್ನಾಗಲಿ ಧರಿಸಬಾರದು, ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿಗಳು ಧರಿಸುವುದು ಕಡ್ಡಾಯವಾಗಿದೆ. ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ ಯಾವುದೇ ರೀತಿಯ ಲೋಹದ ಆಭರಣಗಳನ್ನು ಧರಿಸುವುದನ್ನು ನಿಷೇಧಿಸಿದೆ.

**ನಿಷೇಧಿತ ವಸ್ತುಗಳ ಪಟ್ಟಿ:** ಡ್ರೆಸ್‌ಕೋಡನ್ನು ಅನುಸರಿಸುವುದರ ಜೊತೆಗೆ, ಪರೀಕ್ಷಾ ಕೇಂದ್ರಕ್ಕೆ ಇಲ್ಲಿ ಪಟ್ಟಿ ಮಾಡಲಾದ ಯಾವುದೇ ನಿಷೇಧಿತ ವಸ್ತುಗಳನ್ನು ತೆಗೆದು ಕೊಂಡು ಹೋಗದಂತೆ, ಅಭ್ಯರ್ಥಿಗಳು ಖಚಿತಪಡಿಸಿಕೊಳ್ಳಬೇಕು. ಎಲೆಕ್ಟ್ರಾನಿಕ್ ವಸ್ತುಗಳು, ಮೊಬೈಲ್ ಫೋನ್‌ಗಳು, ಪೆನ್‌ಡ್ರೈವ್‌ಗಳು, ಇಯರ್ ಫೋನ್‌ಗಳು, ಮೈಕ್ರೋಫೋನ್‌ಗಳು, ಬ್ಲೂಟೂಥ್ ಸಾಧನಗಳು, ಕೈ ಗಡಿಯಾರಗಳನ್ನು ಪರೀಕ್ಷಾ ಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ.

ತಿನ್ನಬಹುದಾದ ಪದಾರ್ಥಗಳನ್ನು ಪರೀಕ್ಷಾ ಕೊಠಡಿಯೊಳಗೆ ತರುವುದನ್ನು ಹಾಗು ತಿನ್ನುವುದನ್ನು ನಿಷೇಧಿಸಲಾಗಿದೆ, ಕುಡಿಯುವ ನೀರಿನ ಬಾಟಲಿಗೂ ಸಹ ಅನುಮತಿ ಇರುವುದಿಲ್ಲ. ಪರೀಕ್ಷಾ ಕೇಂದ್ರದಲ್ಲಿಯೇ ಕುಡಿಯುವ ನೀರಿಗೆ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T